ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 4
11–6–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 4

ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷಾ ಕಾರ್ಯಾವಧಿ ವಿಸ್ತರಣೆ

ದಾವಣಗೆರೆ: ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆ ಕಾರ್ಯದ ವೈಜ್ಞಾನಿಕ ದತ್ತಾಂಶವನ್ನು ಸಂಗ್ರಹಿಸಲು ಮೇ.5 ರಿಂದ ಮನೆ ಮನೆ ಭೇಟಿ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆಯನ್ನು ಪ್ರಾರಂಭಿಸಲಾಗಿರುತ್ತದೆ.

ರಾಜ್ಯಾದ್ಯಂತ ಸಮೀಕ್ಷೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕಾಗಿರುವುದರಿಂದ ಜೂನ್ 9 ರಿಂದ 22ರವರೆಗೆ ಸಮೀಕ್ಷೆಯನ್ನು ಅವಧಿಯನ್ನು ವಿಸ್ತರಿಸಲಾಗಿದೆ. ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಕರ್ನಾಟಕ ರಾಜ್ಯಕ್ಕೆ ಸೇರಿದ ಪರಿಶಿಷ್ಟ ಜಾತಿ ಕುಟುಂಬದವರು ನಾಗರೀಕ ಸೇವಾ ಕೇಂದ್ರಗಳಾದ ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಗ್ರಾಮ ಒನ್ ಕೇಂದ್ರಗಳು, ಬಾಪೂಜಿ ಸೇವಾ ಕೇಂದ್ರ ಬಿ.ಬಿ.ಎಂ.ಪಿ ವ್ಯಾಪ್ತಿಯ 198 ಬಿ.ಬಿ.ಎಂ.ಪಿ ವಾರ್ಡ್ ಕಚೇರಿಗಳಲ್ಲಿ ವ್ಯವಸ್ಥೆಮಾಡಿಕೊಂಡಿರುವ ಪ್ರತ್ಯೇಕವಾದ ಶಿಬಿರಗಳಲ್ಲಿ ಸಮೀಕ್ಷೆಗೆ ಅವಕಾಶವನ್ನು ಕಲ್ಪಿಸಲಾಗಿದೆ.

ರಾಜ್ಯದಲ್ಲಿ ಜಾತಿ ಗಣತಿ ಮರು ಸಮೀಕ್ಷೆ

ಹೈಕಮಾಂಡ್ ಭೇಟಿ ಬಳಿಕ ಸಿಎಂ ಸಿದ್ದರಾಮಯ್ಯ ಘೋಷಣೆ

ನವದೆಹಲಿ: ಈ ಹಿಂದೆ ನಡೆಸಲಾಗಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ(ಜಾತಿ ಗಣತಿ)ವರದಿಗೆ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಮತ್ತೊಮ್ಮೆ ಜಾತಿ ಗಣತಿ ಸಮೀಕ್ಷೆ ನಡೆಸಲು ನಿರ್ಧರಿಸಿದೆ.

ಪ್ರಸ್ತುತ ಜಾತಿ ಗಣತಿ ವರದಿ 10 ವರ್ಷ ಹಳೆಯದಾಗಿರುವ ಕಾರಣ ನಿರ್ಧಿಷ್ಟ ಕಾಲ ಮಿತಿಯಲ್ಲಿ ಮರು ಸಮೀಕ್ಷೆ ನಡೆಸಲು ಸರ್ಕಾರ ನಿರ್ಧಾರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ದೆಹಲಿಯಲ್ಲಿ ಘೋಷಿಸಿದ್ದಾರೆ.

ಹೈಕಮಾಂಡ್ ನಾಯಕರ ಬುಲಾವ್ ಮೇರೆಗೆ ದೆಹಲಿಗೆ ತೆರಳಿರುವ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಕಾಂಗ್ರೆಸ್ ವರಿಷ್ಠರ ಜೊತೆ ಮಹತ್ವದ ಮಾತುಕತೆ ನಡೆಸಿ ನಡೆಸಿದಿರು. ಈ ವೇಳೆ ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಳೆ ಸಂಭವಿಸಿದೆ ಕಾಲ್ತುಳಿತ ಪ್ರಕರಣದ ಬಗ್ಗೆ ಸುದೀರ್ಘವಾಗಿ ಚರ್ಚಿಸಿದ್ದಾರೆ. ಅಲ್ಲದೆ ಜಾತಿ ಗಣತಿ ಬಗ್ಗೆಯೂ ಚರ್ಚಿಸಿದ್ದಾರೆ.

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಇಂದಿನ ಸಭೆಯಲ್ಲಿ ಜಾತಿ ಗಣತಿ ಬಗ್ಗೆ ಚರ್ಚೆ ಮಾಡಿದ್ದೇವೆ. ನಿರ್ಧಿಷ್ಟ ಕಾಲ

ಮಿತಿಯಲ್ಲಿ ಮರು ಸರ್ವೇ ನಡೆಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಈ ಬಗ್ಗೆ ಜೂನ್ 12 ರಂದು ಸಚಿವ ಸಂಪುಟ ಸಭೆಯಲ್ಲಿ ಕಾಲ ಮಿತಿ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ರಾಜ್ಯದ ಬೆಳವಣಿಗೆಗಳ ಬಗ್ಗೆ ರಾಹುಲ್ ಗಾಂಧಿ ಚರ್ಚೆ ಮಾಡಿದರು. ಮುಖ್ಯವಾಗಿ ಜಾತಿ ಗಣತಿ ಬಗ್ಗೆ ಸಭೆಯಲ್ಲಿ ಚರ್ಚೆ ಮಾಡಿದರು. ಕೆಲವರು ವರದಿಗೆ ಅಪಸ್ವರ ಎತ್ತಿರುವ ಬಗ್ಗೆ ಚರ್ಚೆ ಆಯಿತು. ಜಾತಿಗಣತಿ ಸಮೀಕ್ಷೆ ಮಾಡಿ 9 ರಿಂದ 10 ವರ್ಷ ಆಗಿದೆ. ಹಾಗಾಗಿ ಮತ್ತೊಮ್ಮೆ ಸಮೀಕ್ಷೆ ಮಾಡಲು ಹೇಳಿದ್ದಾರೆ. ಮತ್ತೊಮ್ಮೆ ಜಾತಿ ಗಣತಿ ಸಮೀಕ್ಷೆಗೆ ನಾವು ಒಪ್ಪಿಗೆ ನೀಡಿದ್ದೇವೆ. 90 ದಿನದೊಳಗೆ ಜಾತಿಗಣತಿ ಸಮೀಕ್ಷೆ ಮುಗಿಯಲಿದೆ ಎಂದು ಸಿ ಎ ಂ ಸ್ಪಷ್ಟಪಡಿಸಿದರು.

ಕಾಲ್ತುಳಿತ ದುರಂತ ಪ್ರಕರಣದ ಬಗ್ಗೆಯೂ ಸಭೆಯಲ್ಲಿ ಚರ್ಚೆ ಆಗಿದ್ದು, ಕೈಗೊಂಡಿರುವ ಕ್ರಮದ ಬಗ್ಗೆ ವಿವರಣೆ ನೀಡಿದ್ದೇವೆ. ಸಿಐಡಿ, ನ್ಯಾ.ಕುನ್ಹಾ ನೇತೃತ್ವದ ತನಿಖೆ ಬಗ್ಗೆ ಮಾಹಿತಿ ನೀಡಿದ್ದೇವೆ. ಪೊಲೀಸ್ ಅಧಿಕಾರಿಗಳ ಅಮಾನತು, ಇಂಟಲಿಜೆನ್ಸ್ ಮುಖ್ಯಸ್ಥರ ವರ್ಗಾವಣೆ ಬಗ್ಗೆ ವರಿಷ್ಠರಿಗೆ ಮಾಹಿತಿ ನೀಡಲಾಗಿದೆ ಎಂದರು.

ನೊಂದವರ ಕಷ್ಟಕ್ಕೆ ಸ್ಪಂದಿಸಲು ಅಧಿಕಾರಿಗಳಿಗೆ ಸಲಹೆ

ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್

ದಾವಣಗೆರೆ.ಜೂ.10; ನಗರದ ಜಿಲ್ಲಾಡಳಿತ ಭವನದಲ್ಲಿರುವ ಕಚೇರಿಯಲ್ಲಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿದರು. ತಮ್ಮ ಗ್ರಾಮಕ್ಕೆ ಸೌಲಭ್ಯ ಕೇಳಿಬಂದವರ ಮನವಿಗಳನ್ನು ಸ್ವೀಕರಿಸಿ ನಂತರ ಜಿಲ್ಲಾಡಳಿತ ಭವನದಲ್ಲಿದ್ದ ಅಧಿಕಾರಿಗಳನ್ನು ಸಂಪರ್ಕಿಸಿ ನೊಂದವರ ಕಷ್ಟಕ್ಕೆ ಸ್ಪಂದನೆ ನೀಡಿದರು ಹಾಗೂ ಜನರನ್ನು ಅಲೆದಾಡಿಸದೇ ಅವರ ಸಂಕಷ್ಟಗಳಿಗೆ ಸಾಧ್ಯವಾದಷ್ಟು ನೆರವಾಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೆಲವರು ತಮ್ಮ ವೈಯಕ್ತಿಕ ಸಮಸ್ಯೆಯನ್ನು ಸಂಸದರ ಬಳಿತೊಡಿಕೊಂಡರು.ತಮ್ಮ ಜಮೀನಿಗೆ ತೆರಳಲು ರಸ್ತೆ ಸಂಪರ್ಕ ಮಾಡಿಕೊಡುವಂತೆ ಕೆಲ ರೈತರು ಸಂಸದರ ಬಳಿ ಮನವಿ ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಸಂಸದರು ಕ್ರಮ ವಹಿಸುವುದಾಗಿ ತಿಳಿಸಿದರು.ಈ ವೇಳೆ ಕೆಲ ವಿದ್ಯಾರ್ಥಿಗಳ ಮನವಿಗಳನ್ನು ಸಹ ಸ್ವೀಕರಿಸಿದರು.

ಜಿಲ್ಲೆಯ ಚನ್ನಗಿರಿ,ಹೊನ್ನಾಳಿ,ಜಗಳೂರು, ಹರಿಹರದಿಂದಲೂ ಆಗಮಿಸಿದ ಜನರು ಸಂಸದರಿಗೆ ತಮ್ಮ ಅಹವಾಲುಗಳನ್ನು ಸಲ್ಲಿಸಿದರು.

ಸಚಿವರ ವಿರುದ್ಧ ಅವಹೇಳನಕಾರಿ ಹೇಳಿಕೆಗೆ ಖಂಡನೆ

ಚಿಕ್ಕಮಗಳೂರು: ಅಂಬೇಡ್ಕರ್ ವಾದಿ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ನಾಯಕರು ವಿಧಾನ ಪರಿಷತ್ ಸದಸ್ಯರನ್ನು ಎತ್ತಿಕಟ್ಟುತ್ತಿರುವುದನ್ನು ವಿರೋಧಿಸಿ ದಲಿತ ಸಂಘರ್ಷ ಸಮಿತಿ ಪದಾಧಿಕಾರಿ ಗಳು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಮಂಗಳವಾರ ಪ್ರತಿಭಟಿಸಿ ಆಕ್ರೋಶ ವ್ಯಕ್ತಪಡಿಸಿದರು.

ಈ ಕುರಿತು ಮಾತನಾಡಿದ ದಸಂಸ ಜಿಲ್ಲಾ ಸಂಚಾಲಕ ಬಾಲಕೃಷ್ಣ ಬಿಳೇಕಲ್ಲು ಸಚಿವ ಪ್ರಿಯಾಂಕ್ ಖರ್ಗೆಯವರ ಜನಪರ ಆಡಳಿತವನ್ನು ಸಹಿಸಿಕೊಳ್ಳದ ರಾಜ್ಯದ ಬಿಜೆಪಿ ನಾಯಕರು ಎಂ.ಎಲ್.ಸಿ.ಗಳಾದ ಛಲವಾದಿ ನಾರಾಯಣಸ್ವಾಮಿ ಮತ್ತು ಎನ್.ರವಿಕುಮಾರ್ ಎತ್ತಿಕಟ್ಟುತ್ತಿರುವುದು ನಾಚಿಕೇಡಿನ ಸಂಗತಿ ಎಂ ದು ಹೇಳಿದರು.

ದಲಿತ ವಿರೋಧಿ, ಅಂಬೇಡ್ಕರ್ ಸಮುದಾಯ ವಂಚಕ ಛಲವಾದಿ ನಾರಾಯಣಸ್ವಾಮಿ ವಿರುದ್ಧ ಕ್ರಮ ಕೈ ಆಗ್ರಹಿಸುವ ಜೊತೆಗೆ ಪ್ರಿಯಾಂಕ್ ಖರ್ಗೆ ಹೆಸರಿಗೆ, ವ್ಯಕ್ತಿತ್ವಕ್ಕೆ, ಕುಟುಂಬಕ್ಕೆ ಧಕ್ಕೆ ತಂದಿರುವ ಹಾಗೂ ಜನಾಂಗಕ್ಕೆ ತಪ್ಪು ಸಂದೇಶ ರವಾನಿಸುತ್ತಿರುವ ರವಿಕುಮಾರ್, ಭಾಜಪ ಆರ್‌ಎಸ್‌ಎಸ್ ನಡೆಯನ್ನು ಖಂಡಿಸಿ ರಾಜ್ಯಾದ್ಯಂತ ದಸಂಸ ಬೃಹತ್ ಪ್ರತಿಭಟನೆಯನ್ನು ನಡೆಸುತ್ತಿದೆ ಎಂದರು.

ಕಲಬುರ್ಗಿ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ನಡೆದ ಪ್ರತಿಭಟನೆ ರ್‍ಯಾಲಿಯಲ್ಲಿ ಕಲಬುರ್ಗಿ ಜಿಲ್ಲಾ ಧಿಕಾರಿಗಳು ನೆರೆದೇಶದಿಂದ ಬಂದವರಂತೆ ಕಾಣುತ್ತಾರೆಂದು ಅಗೌರವ, ಸಂವಿಧಾನ ವಿರೋಧಿ ಪದವನ್ನು ಬಳಸಿ, ಜನರ ಹಾಗೂ ಐಎಎಸ್ ಅಧಿಕಾರಿಗಳ ಕೆಂಗಣ್ಣಿಗೆ ಗುರಿಯಾಗಿರುವ ವಿ.ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿಕೆಯನ್ನು ಖಂಡಿಸುತ್ತೇವೆ ಎಂದು ಹೇಳಿದರು.

ಪ್ರತಿಭಟನೆ ಬಳಿಕ ಬಿಜೆಪಿ ವಿಧಾನ ಪರಿಷತ್ ಸದಸ್ಯರುಗಳ ಛಲವಾದಿ ನಾರಾಯಣಸ್ವಾಮಿ ಮತ್ತು ಎನ್.ರವಿಕುಮಾರ್ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಘಟನಾ ಸಂಚಾಲಕರಾದ ಯೋಗೀಶ್, ಸತೀಶ್, ಗಿರೀಶ್, ತಾಲ್ಲೂಕು ಸಂಚಾಲಕ ಪ್ರಸನ್ನ, ಖಜಾಂಚಿ ಸಿದ್ದಪ್ಪ, ಮಹಿಳಾ ಸಂಘಟನಾ ಸಂಚಾಲಕಿ ಸರೋಜ, ಮುಖಂಡರುಗಳಾದ ಚಂದ್ರು, ಉಮೇಶ್, ವಸಂತ್, ರಾಜೇಶ್, ರಘು, ಹಾಜರಿದ್ದರು.

ಮೋದಿ ಆಡಳಿತ ಖಂಡಿಸುವ ನೈತಿಕ ಹಕ್ಕು ಕಾಂಗ್ರೆಸಿಗೆ ಇಲ್ಲ: ಎಂ.ಪಿ. ರೇಣುಕಾಚಾರ್ಯ

ದಾವಣಗೆರೆ: ದೇಶವನ್ನು ಅಭಿವೃದ್ಧಿಯತ್ತ ಮುನ್ನಡೆಸುತ್ತಿರುವ ನರೇಂದ್ರ ಮೋದಿ ಸರ್ಕಾರದ 11 ವರ್ಷಗಳ ಆಡಳಿತ ಸುವರ್ಣಯುಗವಾಗಿದೆ ಎಂದು ಮಾಜಿ ಎಂ.ಪಿ. ರೇಣುಕಾಚಾರ್ಯ ಶ್ಲಾಘಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವದ ಸಶಕ್ತ ರಾಷ್ಟ್ರಗಳಲ್ಲಿ ಮೂರನೇ ಸ್ಥಾನದಲ್ಲಿರುವ ಭಾರತವನ್ನು ಮೊದಲನೇ ಸ್ಥಾನಕ್ಕೆ ತರುವ ಕನಸು ಮೋದಿಯವರದಾಗಿದ್ದು, ಈ ನಿಟ್ಟಿನಲ್ಲಿ ಕ್ರಿಯಾಶೀಲರಾಗಿವ ಮೋದಿ ಆಡಳಿತವನ್ನು ಹೀಗಳೆಯುವ ಯಾವುದೇ ನೈತಿಕ ಹಕ್ಕು ಕಾಂಗ್ರೆಸಿಗೆ ಇಲ್ಲ ಎಂದರು.

ಮೂರು ಬಾರಿ ಪ್ರಧಾನಿಯಾದ ಮೋದಿಯವರು ತೆಗೆದುಕೊಂಡ ದಿಟ್ಟ ನಿರ್ಧಾರಗಳಿಂದ ಜಗತ್ತಿನಲ್ಲೇ ದೇಶಕ್ಕೆ ಗೌರವ ತಂದಿಟ್ಟಿದೆ. ನೋಟು ಅಮಾನ್ಯೀಕರಣ, ತ್ರಿವಳಿ ತಲಾಕ್, 370 ಆರ್ಟಿಕಲ್ ರದ್ದು, ಆತ್ಮನಿರ್ಭರ್, ಕೋವಿಡ್ ವ್ಯಾಕ್ಸಿನ್, ಆಯುಷ್ಮಾನ್ ಭಾರತ್, ಜನ್ ಧನ್, ಯೋಜನೆ, ಫಸಲ್ ಬಿಮಾ ಯೋಜನೆ ಜಾರಿ, ಮೇಕ್ ಇನ್ ಇಂಡಿಯಾ, ಡಿಜಿಟಲ್ ಇಂಡಿಯಾಗೆ ಒತ್ತು, ಪ್ರಧಾನಿ ಆವಾಸ್ ಯೋಜನೆ, ಮುದ್ರಾ ಯೋಜನೆ, ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಅನುಷ್ಠಾನ, ಹೀಗೆ ಜನಪರ ಯೋಜನೆಗಳನ್ನು ಇತ್ತು ಸರ್ಕಾರ ಮೋದಿ ಸರ್ಕಾರವಾಗಿದೆ ಎಂದರು.

ಅದೇ ಕಾಂಗ್ರೆಸ್ ಅವಧಿಯಲ್ಲಿ ಪಿಒಕೆ ಬಿಟ್ಟು ಕೊಟ್ಟಿದ್ದು, ಭ್ರಷ್ಟಾಚಾರವೇ ಅವರ ಸಾಧನೆಯಾಗಿದೆ ಎಂದು ಉದಾಹರಣೆ ಸಹಿತ ಹೇಳಿದರು. ಸುದ್ದಿಗೋಷ್ಠಿಯಲ್ಲಿ, ಅರಕೆರೆ ನಾಗರಾಜ್, ಬೆಲೆಮಲ್ಲೂರು ವೀರಪ್ಪ, ರಂಗಪ್ಪ, ಮಾರುತಿ ನಾಯ್ಕ, ರಾಜು ವೀರಣ್ಣ, ಪೈಲ್ವಾನ್, ವೆಂಕಟೇಶ್, ಆಜೇಯ, ಚೇತನ ಇತರರು ಇದ್ದರು.

ಬೆಂಗಳೂರು ಕಾಲ್ತುಳಿತ: ರಾಜ್ಯ ಸರ್ಕಾರದ ವಿರುದ್ಧ ಜೂನ್ 13 ರಂದು ಬಿಜೆಪಿ ಬೃಹತ್ ಪ್ರತಿಭಟನೆ

ಶಿವಮೊಗ್ಗ: ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ವಿಜಯೋತ್ಸವದ ಸಂದರ್ಭದಲ್ಲಿ ಜೂನ್ 4 ರಂದು 11 ಜೀವಗಳನ್ನು ಬಲಿ ಪಡೆದ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲು ಯೋಜಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಘೋಷಿಸಿದ್ದಾರೆ.

ಮಂಗಳವಾರ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರವನ್ನು ಉರುಳಿಸುವವರೆಗೆ ಪ್ರತಿಭಟನೆ ನಡೆಸಲು ಬಿಜೆಪಿ ನಿರ್ಧರಿಸಿದೆ ಎಂದು ಹೇಳಿದರು.

'ಜೂನ್ 13ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಯಲಿದೆ. ಬಿಜೆಪಿ ಕಾರ್ಯಕರ್ತರು, ಮೃತ ಕುಟುಂಬಗಳ ಸದಸ್ಯರು ಮತ್ತು ಘಟನೆಯ ಸಂತ್ರಸ್ತರು ಭಾಗವಹಿಸಲಿದ್ದಾರೆ. ಸುಮಾರು 15,000–20,000 ಪ್ರತಿಭಟನಾಕಾರರು ಸೇರುವ ನಿರೀಕ್ಷೆಯಿದೆ' ಎಂದು ಅವರು ಹೇಳಿದರು.

'ಆರ್‌ಸಿಬಿ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಮತ್ತು ಈವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ಡಿಎನ್‌ಎ ಆರೋಪಿಗಳಲ್ಲ. ಘಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಆರೋಪಿ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎರಡನೇ ಆರೋಪಿ ಮತ್ತು ಗೃಹ ಸಚಿವ ಪರಮೇಶ್ವರ ಮೂರನೇ ಆರೋಪಿಯಾಗಿದ್ದಾರೆ. ನಂತರದ ಜವಾಬ್ದಾರಿ ಆರ್‌ಸಿಬಿ, ಕೆಎಸಿಎ ಮತ್ತು ಡಿಎನ್‌ಎ ಮೇಲೆ ಇರುತ್ತವೆ' ಎಂದು ಹೇಳಿದ್ದಾರೆ.

ಬಿಜೆಪಿ ಈ ಪ್ರಕರಣದ ತನಿಖೆಯನ್ನು ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ನಡೆಸಬೇಕೆಂದು ಒತ್ತಾಯಿಸಿತ್ತು. ಆದರೆ, ಸರ್ಕಾರ ತನಿಖೆಯನ್ನು ಅಪರಾಧ ತನಿಖಾ ಇಲಾಖೆಗೆ (ಸಿಐಡಿ) ವಹಿಸಿತು. ಅಲ್ಲದೆ, ನಿವೃತ್ತ ಹೈಕೋರ್ಟ್ ನ್ಯಾಯಾಧೀಶರಿಂದಲೂ ತನಿಖೆಗೂ ಆದೇಶಿಸಿದೆ.

ರಾಜ್ಯ ಸರ್ಕಾರಕ್ಕೆ ಕ್ಲೀನ್ ಚಿಟ್ ನೀಡಲು, ಅಧಿಕಾರಿಗಳನ್ನು ದೂಷಿಸಲು ಮತ್ತು ಜವಾಬ್ದಾರಿಯಿಂದ ನುಣುಚಿಕೊಳ್ಳಲು ರಾಜ್ಯ ಸರ್ಕಾರ ತಮಗಿಷ್ಟವಾದ ವ್ಯಕ್ತಿಯನ್ನು ನೇಮಿಸಿಕೊಂಡಿದೆ. ರಾಜ್ಯ ಸರ್ಕಾರಕ್ಕೆ ನಾಚಿಕೆ ಇದ್ದರೆ, ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ತನಿಖೆ ನಡೆಸುವಂತೆ ನೋಡಿಕೊಳ್ಳಬೇಕು. ಸರ್ಕಾರ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ ಎಂದರು.

ವಿಧಾನಸೌಧದ ಮೆಟ್ಟಿಲುಗಳ ಬಳಿ ಚಪ್ಪಲಿ ಮತ್ತು ಕಲ್ಲುಗಳನ್ನು ಎಸೆದ ಆರ್‌ಸಿಬಿ ಅಭಿಮಾನಿಗಳನ್ನು ಟೀಕಿಸಿದ ವಿಜಯೇಂದ್ರ, ನಾಯಕರಿಗೆ ಸೆಲ್ಫಿ ಮತ್ತು ಜನಪ್ರಿಯತೆಯ ಹುಚ್ಚು ಇತ್ತು. ಹೀಗಾಗಿ ಅವರು ರಾಜ್ಯದ ಖ್ಯಾತಿಯನ್ನು ಹಾಳು ಮಾಡಿದ್ದಾರೆ. ರಾಜ್ಯಪಾಲರನ್ನೂ ದಾರಿ ತಪ್ಪಿಸಲಾಯಿತು ಮತ್ತು ಕಾರ್ಯಕ್ರಮದಲ್ಲಿ ಕುಳಿತುಕೊಳ್ಳುವಂತೆ ಮಾಡಲಾಯಿತು ಎಂದು ಅವರು ಹೇಳಿದರು.

'ವಿಧಾನಸೌಧದಲ್ಲಿ ಕಾರ್ಯಕ್ರಮ ನಡೆಸಲು ನಾವು ಅವರಿಗೆ ಹೇಳಿದ್ದೇವೆಯೇ? ಮೆರವಣಿಗೆಗೆ ಅನುಮತಿ ಕೋರಿದ್ದೆವು. ಮೆರವಣಿಗೆ ನಡೆಸಿದ್ದರೆ ಬಹುಶಃ ಈ ದುರಂತ ಸಂಭವಿಸುತ್ತಿರಲಿಲ್ಲ" ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಸರ್ಕಾರದ ಜವಾಬ್ದಾರಿಯಲ್ಲವೇ? ಅದು ವಿರೋಧ ಪಕ್ಷದ ಜವಾಬ್ದಾರಿಯೇ?. ರಾಷ್ಟ್ರದ ಜನರ ಭಾವನೆಗಳನ್ನು ಮುಖ್ಯಮಂತ್ರಿಗೆ ತಿಳಿಸುವ ಉದ್ದೇಶದಿಂದ ಮುಖ್ಯಮಂತ್ರಿಗೆ ಬಹಿರಂಗ ಪತ್ರ ಬರೆದಿದ್ದೇನೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳು ಮತ್ತು ದುಃಖಿಸುತ್ತಿರುವವರ ಭಾವನೆಗಳನ್ನು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ರಾಜ್ಯ ಸರ್ಕಾರ ಅರ್ಥಮಾಡಿಕೊಳ್ಳಬೇಕೆಂದು ಖಚಿತಪಡಿಸಿಕೊಳ್ಳಲು ಈ ಪತ್ರವನ್ನು ಬರೆಯಲಾಗಿದೆ ಎಂದು ವಿಜಯೇಂದ್ರ ಹೇಳಿದರು.

ರಾಜ್ಯ ಸರ್ಕಾರ ವಿರುದ್ಧ ಕರುನಾಡ ವಿಜಯಸೇನೆ ಪ್ರತಿಭಟನೆ

ಚಿತ್ರದುರ್ಗ: ಆರ್.ಸಿ.ಬಿ. ತಂಡ ಹದಿನೆಂಟು ವರ್ಷಗಳ ನಂತರ ಫೈನಲ್ ಕಪ್ ಗೆದ್ದಿರುವುದಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಏರ್ಪಡಿಸಲಾಗಿದ್ದ ಸಂಭ್ರಮಾಚರಣೆ ವೇಳೆ ಉಂಟಾದ ನೂಕು ನುಗ್ಗಲಿನಲ್ಲಿ 11 ಮಂದಿ ಬಲಿಯಾಗಿರುವುದಕ್ಕೆ ಬೆಂಗಳೂರಿನ ಪೊಲೀಸ್ ಕಮಿಷನರ್ ಬಿ.ದಯಾನಂದ್ ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತ್ತುಗೊಳಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ವಿರೋಧಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾ ರಕ್ಷಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ನಗರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕರಿಗ

ಇಂದಿನ ರಾಶಿ ಭವಿಷ್ಯ

ಮೇಷ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ, ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಚಿಂತಿಸಬೇಡಿ, ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ.

ವೃಷಭ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮಕ್ಕಳು ಅಭ್ಯಾಸಗಳ ಮೇಲೆ ಗಮನ ಹರಿಸಬೇಕು ಹಾಗೂ ಭವಿಷ್ಯದ ಬಗ್ಗೆ ಯೋಜನೆ ರೂಪಿಸಬೇಕು. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ಒಂದು ಕಠಿಣ ಸಮಯದ ನಂತರ, ಕೆಲಸದಲ್ಲಿ ಏನಾದರೂ ಸುಂದರವಾದ್ದರಿಂದ ಈ ದಿನ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತದೆ. ಜೀವನದ ಪ್ರಕ್ಷುಬ್ಧತೆಯ ಮಧ್ಯೆ, ಇಂದು ನೀವು ನಿಮ್ಮ ಮಕ್ಕಳಿಗಾಗಿ ಸಮಯವನ್ನು ತೆಗೆದುಕೊಳ್ಳುತ್ತೀರಿ.

ಮಿಥುನ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ.ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

ಕರ್ಕ ರಾಶಿ

ಧ್ಯಾನ ಪರಿಹಾರ ತರುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ. ಪ್ರಣಯ ಉಂಟಾಗುವ ಸಾಧ್ಯತೆಯಿದ್ದರೂ ಇಂದ್ರಿಯದ ಭಾವನೆಗಳು ನಿಮ್ಮ ಸಂಬಂಧವನ್ನು ಹಾಳು ಮಾಡಬಹುದು. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

ಸಿಂಹ ರಾಶಿ

ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತುರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು. ನಿಮ್ಮ ಸ್ನೇಹಿತರ ಸಹಾಯದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

ಕನ್ಯಾ ರಾಶಿ

ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ.

ತುಲಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ – ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

ವೃಶ್ಚಿಕ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

ಧನು ರಾಶಿ

ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ. ಹೀಗಿದ್ದಲ್ಲಿ ಟೀಕೆಯನ್ನು ಎದುರಿಸುವ ಸಾಮರ್ಥ್ಯ ನಿಮ್ಮಲ್ಲಿ ಹೆಚ್ಚಿರುತ್ತದೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

ಮಕರ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನೀವು ಇಂದು ಹಾಜರಾದ ಸಾಮಾಜಿಕ ಸಂತೋಷಕೂಟದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

ಕುಂಭ ರಾಶಿ

ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

ಮೀನ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ನೀವು ನಿರಾಸೆ ಅನುಭವಿಸುತ್ತೀರಿ ಅದೇಕೆಂದರೆ ನೀವು ಬಯಸುತ್ತಿದ್ದ ಗುರುತಿಸುವಿಕೆ ಮತ್ತು ಪ್ರತಿಫಲಗಳು ಮುಂದೂಡಲ್ಪಡುತ್ತವೆ.

ಹೊರಗುತ್ತಿಗೆ ಪೌರ ನೌಕರರ ಖಾಯಂಗೊಳಿಸಲು ಪ್ರಾಮಾಣಿಕ ಪ್ರಯತ್ನ – ಶಾಸಕ ತಮ್ಮಯ್ಯ

ಚಿಕ್ಕಮಗಳೂರು: ಆಸ್ಪತ್ರೆ, ಪುರಸಭೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಪೌರಕಾರ್ಮಿಕರಾಗಿ ಬದುಕಿಗಾಗಿ ವೃತ್ತಿ ಮಾಡುತ್ತಿರುವ ಪೌರ ನೌಕರರಿಗೆ ಸರ್ಕಾರದಿಂದ ನ್ಯಾಯಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಹೆಚ್.ಡಿತಮ್ಮಯ್ಯ ಭರವಸೆ ನೀಡಿದರು.

ಅವರುಇಂದು ನಗರದಅಂಬೇಡ್ಕರ್ ಭವನದಲ್ಲಿಕರ್ನಾಟಕದಲಿತ ಸಂಘರ್ಷ ಸಮಿತಿ ಏರ್ಪಡಿಸಿದ್ದ ದಲಿತ ಚಳುವಳಿಯ ಪಿತಾಮಹ ಪ್ರೋ.ಬಿ.ಕೃಷ್ಣಪ್ಪರವರ 87ನೇ ಜಯಂತಿ ಅಂಗವಾಗಿ ದ.ಸಂ.ಸ ಸದಸ್ಯತ್ವ ನೋಂದಣಿಆಂದೋಲನಾ ಸಮಾರಂಭದಲ್ಲಿಕೃಷ್ಣಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಪುರಸಭೆಗಳಲ್ಲಿ ಪೌರಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ನೌಕರರನ್ನುಖಾಯಂ ಮಾಡಬೇಕೆಂಬ ಬೇಡಿಕೆಯಜೊತೆಗೆ ಸರ್ಕಾರಿ ನೌಕರರಎಲ್ಲಾ ಸೌಲಭ್ಯಗಳು ಸಿಗಬೇಕು ಎಂಬ ಮನವಿಯನ್ನು ಸ್ವೀಕರಿಸಿ ಉತ್ತರಿಸಿದರು.

ಈ ಸಮಸ್ಯೆ ಕೇವಲ 3 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿಲ್ಲ ಇಡೀರಾಜ್ಯದ ಸಮಸ್ಯೆಯಾಗಿದ್ದು, ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವಕಾರ್ಮಿಕರನ್ನು ಈಗಾಗಲೇ ರಾಜ್ಯ ಸರ್ಕಾರಖಾಯಂ ನೌಕರರೆಂದು ಘೋಷಿಸಿದೆ ಎಂದು ಹೇಳಿದರು.

ಇದೇ ಮಾದರಿಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಪೌರಕಾರ್ಮಿಕರುತಮ್ಮಜೀವದ ಅಂಗು ತೋರೆದು ಕೆಲಸ ಮಾಡುತ್ತಿರುವವರಿಗೆ ಸರ್ಕಾರ ಸ್ಪಂದಿಸಬೇಕೆಂದು ತಿಳಿಸಿದರು.

ಬಡವರು, ಶೋಷಿತರು ಸಮಾಜದ ಮುನ್ನೆಲೆಗೆ ಬರಬೇಕೆಂದು ಹೋರಾಟ ಮಾಡಿದ ಬಿ.ಕೃಷ್ಣಪ್ಪ ನವರಿಗೆ ನ್ಯಾಯಒದಗಿಸುವಕಾರ್ಯಕವಾದಾಗ ಮಾತ್ರಅವರ ಹೆಸರುಚಿರಸ್ಥಾಯಿಯಾಗಿಜನಮಾನಸಲ್ಲಿ ಉಳಿಯುತ್ತದೆ, ಬುದ್ಧ, ಬಸವ, ವಾಲ್ಮೀಕಿ, ಕನಕದಾಸ, ಅಂಬೇಡ್ಕರ್, ನಾರಾಯಣಗುರುಇವರತತ್ವ ಆದರ್ಶಗಳು ಜನಮಾಸದಲ್ಲಿ ಉಳಿದಿದೆ ಎಂದರು.ದ.ಸಂ.ಸ ಸದಸ್ಯತ್ವ

ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸಾಮಾಜಿಕವಾಗಿ, ಆರ್ಥಿಕವಾಗಿಉನ್ನತ ಸ್ಥಾನಕ್ಕೇರಿದ ಸಮುದಾಯದಜನತನ್ನ ಮೂಲ ಬೇರನ್ನು ಮರೆಯಬಾರದು, ಮರೆತರೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್‌ಅಂಬೇಡ್ಕರ್ ವಿಚಾರ ಧಾರೆಗಳಿಗೆ ಅಪಮಾನ ಮಾಡಿದಂತೆಯೇಎಂದು ಹೇಳಿದರು.

ವೈಚಾರಿಕ ಚಳುವಳಿಯನ್ನು ಎಲ್ಲರೂ ಸೇರಿ ಮುನ್ನಡೆಸುವಜೊತೆಗೆ ಈ ಸದಸ್ಯತ್ವಅಭಿಯಾನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ ಅವರು ವೈಚಾರಿಕ ವಿಚಾರವನ್ನು ಅಳವಡಿಸಿಕೊಂಡು ಸದಸ್ಯತ್ವ ಪಡೆದುಕೊಂಡಾಗ ಮಾತ್ರ ಸದಸ್ಯತ್ವಕ್ಕೆ ಶಕ್ತಿ ಬರುತ್ತದೆಎಂದರು. ದ.ಸಂ.ಸ ರಾಜ್ಯ ಸಂಚಾಲಕ ತರೀಕೆರೆಎನ್. ವೆಂಕಟೇಶ್‌ಅಧ್ಯಕ್ಷತೆ ವಹಿಸಿ ಮಾತನಾಡಿದೇಶದಲ್ಲಿದಲಿತರ ಮೇಲಿನ ದೌರ್ಜನ್ಯ, ದಬ್ಬಾಳಿಕೆಯನ್ನು ಮನಗಂಡು ಪ್ರಗತಿಪರಚಿಂತಕರಾದ ಬಿ.ಕೃಷ್ಣಪ್ಪನವರು ಸಂಘಟಿತರಾಗಿ ಹೋರಾಟ ಮಾಡಿದ ಪರಿಣಾಮಇಂದುದಲಿತರುನ್ಯಾಯಯುತ ‘ಜೀವನ ನಡೆಸಲು ಸಾದ್ಯವಾಗಿದೆಎಂದು ಹೇಳಿದರು.

ಕೃಷ್ಣಪ್ಪನವರಜನ್ಮ ದಿನೋತ್ಸವದ ಅಂಗವಾಗಿ ದ.ಸಂ.ಸ ಸದಸ್ಯತ್ವಅಭಿಯಾನ ನೆಡೆಸುತ್ತಿದ್ದು, ರಾಜ್ಯಾದ್ಯಂತಕೃಷ್ಣಪ್ಪನವರಜಯಂತಿಯನ್ನು ವಿಜೃಂಭಣೆಯಿಂದಆಚರಿಸಲಾಗುತ್ತಿದೆ, 1970 ರಕಾಲಘಟ್ಟದಲ್ಲಿದೇಶದಲ್ಲಿ ನೆಡೆಯುತ್ತಿದ್ದಅಸಮಾನತೆ, ಜಾತಿ ಪದ್ಧತಿ ವಿರುದ್ಧ ಹೋರಾಟ ಮಾಡಿದವರಿಗೆ ಈ ಜಯಂತಿಅರ್ಥಪೂರ್ಣಎಂದು ತಿಳಿಸಿದ’ರು.ರಾಜ್ಯಾದ್ಯಂತ’ದಲಿತ’ ಸಮುದಾಯದ ಮುಖಂಡರುಗಳನ್ನು ದೆಹಲಿಗೆ ಆಹ್ವಾನಿಸಿದಾಗ ದೇವನೂರು ಮಹಾದೇವ್, ಬಿ. ಕೃಷ್ಣಪ್ಪ ಮತ್ತಿತರರು ಆ ಸಭೆಯಲ್ಲಿ ಭಾಗವಹಿಸಿ ಹೋರಾಟದ ರೂಪುರೇಷಗಳ ಬಗ್ಗೆ ತಿಳಿಸುಕೊಂಡು ಬಂದುರಾಜ್ಯದಲ್ಲಿ 1975 ರಲ್ಲಿದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿದ್ದು, ಇಂದು ಬೃಹದಾಕಾರವಾಗಿ ಸಂಘಟನೆ ಬೆಳೆಯುತ್ತಿದೆ ಎಂದು ಬಣ್ಣಿಸಿದರು.

ಈ ಕಾರ್ಯಕ್ರಮದಲ್ಲಿ ಬೆಂಗಳೂರಿನ ಪೌರಕಾರ್ಮಿಕರ ಮಹಾ ಸಂಘದರಾಜ್ಯಾಧ್ಯಕ್ಷ ನಾರಾಯಣ, ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್, ಪತ್ರಕರ್ತರ ಸಂಘದರಾಜ್ಯಾಧ್ಯಕ್ಷಜಿ. ಎನ್‌ರಾಜಶೇಖರ್, ಡಾ.ಭರತ್ ಆಂಚೆ, ಶ್ರೀಧರ್ ಕಲಿವೀರ್ ಮತ್ತಿತರರು ಉಪಸ್ಥಿತರಿದ್ದರು.

ಸಿದ್ದರಾಮಯ್ಯ–ಶಿವಕುಮಾರ್ ಬಂಧನ ಯಾಕಿಲ್ಲ..? : ಜೆಡಿಎಸ್

ಬೆಂಗಳೂರು: ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದ ದುರಂತವು ಕಾಂಗ್ರೆಸ್ ಸರ್ಕಾರದ ಪ್ರಾಯೋಜಿತ ಕೊಲೆ ಎಂದು ಆರೋಪಿಸಿರುವ ಜೆಡಿಎಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಂಧನ ಯಾಕಿಲ್ಲ? ಎಂದು ಪ್ರಶ್ನಿಸಿದೆ.

ಈ ಸಂಬಂಧ ತನ್ನ ಎಕ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಆರ್‌ಸಿಬಿ ವಿಜಯೋತ್ಸವದಲ್ಲಿ ಪ್ರಚಾರ ಪಡೆಯಲು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ಪೈಪೋಟಿಯೇ ಈ ಮಹಾದುರಂತಕ್ಕೆ ಕಾರಣ ಎಂದು ಆರೋಪಿಸಿದೆ.

ವಿಧಾನಸೌಧದ ಮುಂಭಾಗ ದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಮುಖ್ಯ ಅತಿಥಿ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮುಖ್ಯ ಅತಿಥಿ. ಇವರಿಬ್ಬರ ರಾಜಕೀಯ ಪ್ರತಿಷ್ಠೆ. ನಾನೇ ಎಂಬ ಅಹಂಗೆ ಅಮಾಯಕ ಜೀವಗಳನ್ನು ಬಲಿತೆಗೆದುಕೊಂಡಿದ್ದಾಗಿದೆ ಎಂದು ಹೇಳಿದೆ.

ಕಾಲ್ತುಳಿತ ದುರಂತದ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಕಾಂಗ್ರೆಸ್ ಸರ್ಕಾರ ಆರ್‌ಸಿಬಿ ಮತ್ತು ಕೆಎಸ್‌ಸಿಎ ವಿರುದ್ಧ ದೂರು ದಾಖಲಿಸಿದೆ ಎಂದು ಆರೋಪಿಸಿದೆ. ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವೈಫಲ್ಯದ ಬಗ್ಗೆ ಎದ್ದಿರುವ ಜನಾಕ್ರೋಶದ ಗಮನವನ್ನು ಬೇರೆಡೆ ಸೆಳೆಯಲು ಸ್ಟಾರ್ ಆಟಗಾರ ವಿರಾಟ್ ಕೊಹ್ಲಿಯನ್ನೂ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಜೆಡಿಎಸ್ ಆಪಾದಿಸಿದೆ.

ನಗರದಲ್ಲಿ ಎರಡು ಕಡೆ ಏಕಕಾಲದಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿದರೆ ಭದ್ರತೆ ಹಾಗೂ ಜನದಟ್ಟಣೆ ನಿಯಂತ್ರಣ ಮಾಡುವುದು ಕಷ್ಟ ಎಂಬ ಪೊಲೀಸರ ಎಚ್ಚರಿಕೆಯ ಮಾತುಗಳನ್ನು ಧಿಕ್ಕರಿಸಿ, ಆರ್‌ಸಿಬಿ ದಿಗ್ವಿಜಯದ ಕ್ರೆಡಿಟ್ ಪಡೆಯಲು ರಾಜ್ಯ ಸರ್ಕಾರ ಹಠಕ್ಕೆ ಬಿದ್ದು ಸಮಾರಂಭ ನಡೆಸಿ 11 ಮುಗ್ಧ ಜೀವಗಳನ್ನು ಬಲಿ ಪಡೆದಿದೆ ಎಂದು ದೂರಿದೆ.

ಕಾಲ್ತುಳಿತ ಮಹಾದುರಂತದ ಬಗ್ಗೆ ದೇಶಾದ್ಯಂತ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳು, ಭದ್ರತಾ ಎಡವಟ್ಟುಗಳು ಜಗಜ್ಜಾಹೀರಾಗಿ ಸುದ್ದಿಯಾಗುತ್ತಿದೆ. ಹೊಣೆಗೇಡಿ ಕಾಂಗ್ರೆಸ್ ಸರ್ಕಾರ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದೆ. ಅತ್ಯಂದ್ಣಟಿಜಜಿಂಟಿಜಡ ಕುತಂತ್ರದಿಂದ ವಿರಾಟ್ ಕೊಹ್ಲಿ ವಿರುದ್ಧವೂ ದೂರು ನೀಡಲಾಗಿದೆ ಎಂದು ಆರೋಪಿಸಿದೆ.

ತರಳಬಾಳು ಬಡಾವಣೆ ನಾಗರೀಕ ಸಮಿತಿಯಿಂದ ಪರಿಸರ ದಿನಾಚರಣೆ

ದಾವಣಗೆರೆ: ನಗರದ ತರಳಬಾಳು ಬಡಾವಣೆ ಮೂರನೇ ಹಂತದ ನಾಗರಿಕ ಹಿತರಕ್ಷಣಾ ಸಮಿತಿ(ರಿ) ವತಿಯಿಂದ ಭಾನುವಾರ ಬಡಾವಣೆಯ ಉದ್ಯಾನವನದಲ್ಲಿ ಪರಿಸರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಮತ್ತು ಉಚಿತ ಸಸಿ ವಿತರಣಾ ಕಾರ್ಯಕ್ರಮವನ್ನು ಬಡಾವಣೆಯ 19ನೇ ಮುಖ್ಯರಸ್ತೆಯ ಸಾರ್ವಜನಿಕ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಿತಿಯ ಅಧ್ಯಕ್ಷರಾದ ಸಿ.ಆರ್. ಮಲ್ಲಿಕಾರ್ಜುನಯ್ಯ ರವರು ವಹಿಸಿಕೊಂಡಿದ್ದರು. ವಿಶ್ರಾಂತ ಪ್ರಾಚಾರ್ಯರು, ಕರುಣಾ ಜೀವ ಟ್ರಸ್ಟ್ ನ ನಿರ್ದೇಶಕರು

ಆದ ಕೆ.ಇ. ಈಶ್ವರಪ್ಪ ಕಾರ್ಯಕ್ರಮವನ್ನು ಉದ್ಯಾನವನದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಚಾಲನೆ ನೀಡಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿ ಯಾವುದೇ ಬಡಾವಣೆಯ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಸೌಹಾರ

ಮಕ್ಕಳಿಗೆ ಅಕ್ಷರ ಅಭ್ಯಾಸ

ಚಿತ್ರದುರ್ಗ : ಚಿತ್ರದುರ್ಗ ನಗರದ ಹೂರವಲಯದ ಮದಕರಿಪುರದ ಬಳಿಯಲ್ಲಿನ ಶ್ರೀ ಮಂಜುನಾಥ್‌ಸ್ವಾಮಿ ಎಜುಕೇಷನ್ ಚಾರಿಟಬಲ್ ಟ್ರಸ್ಟ್‌ವತಿಯಿಂದ ಎಸ್.ಎಂ.ಎಸ್.ಗುರುಕುಲಮ್ ಹಾಗೂ ಎಸ್.ಎಂ.ಎಸ್. ಸ್ಕೂಲ್ ಅಫ್ ಎಕ್ಸೆಲೆಂಟ್ ಶಾಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಶಾಲೆ ಪ್ರಾರಂಭದ ಹಿನ್ನಲೆಯಲ್ಲಿ ಮಕ್ಕಳಿಗೆ ಶುಕ್ರವಾರ ಅಕ್ಷರ ಅಭ್ಯಾಸದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಕ್ಕಳಿಗೆ ತಾವು ಕಲಿಯುವ ಪುಸ್ತಕಕ್ಕೆ ಪೂಜೆಯನ್ನು ಶಾಸ್ತ್ರೋಸ್ತವಾಗಿ ಮಾಡಿಸಿ ತಮ್ಮ ಮಕ್ಕಳ ಮುಂದಿನ ಅಭ್ಯಾಸ ಸರಿಯಾದ ರೀತಿಯಲ್ಲಿ ನಡೆಯಲಿ ಉತ್ತಮವಾದ ಶಿಕ್ಷಣವನ್ನು ಪಡೆಯಲಿ ಎಂದು ಪೋಷಕರು ಪ್ರಾರ್ಥಿಸಿದರು.

ಈ ಸಮಯದಲ್ಲಿ ಮಾತೃಶ್ರೀ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಎನ್.ಶಾಂತ ವೆಂಕಟೇಶ್, ಶ್ರೀ ಮಂಜುನಾಥ್ ಸ್ವಾಮಿ ಎಜುಕೇಷನ್ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ವಿ.ಎಲ್. ಪ್ರಶಾಂತ್ ಕುಮಾರ್, ಕಾರ್ಯದರ್ಶಿ ವಿ.ಎಲ್.ಪ್ರವೀಣ್ ಕುಮಾರ್, ಕಾರ್ಯಕಾರಿ ಸಮಿತಿ ಸದಸ್ಯರಾದ ಶ್ರೀಮತಿ ಗೌರಿ ಪ್ರಶಾಂತ್, ಶ್ರೀಮತಿ ಕಾವ್ಯ ಪ್ರವೀಣ್, ಮಕ್ಕಳ ಪೋಷಕರು, ಶಾಲಾ ಸಿಬ್ಬಂದಿ ವರ್ಗ ಹಾಜರಿದ್ದರು.

ಪೂರ್ವಭಾವಿ ಸಭೆಯಲ್ಲಿ ಎಡಿಸಿ ಮಹಮ್ಮದ್ ಝುಬೇರ್ ನಿರ್ದೇಶನ

ಜೂ.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ; ಅಗತ್ಯ ಸಿದ್ಧತೆ ಕೈಗೊಳ್ಳಿ

ಬಳ್ಳಾರಿ: ಜಿಲ್ಲೆಯಲ್ಲಿ ಜೂನ್ 12ರಂದು ವಿಶ್ವಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿಯ ವಿರೋಧಿ ದಿನಾಚರಣೆ ಕಾರ್ಯಕ್ರಮ ಆಯೋಜನೆ ಕುರಿತಂತೆ ಶುಕ್ರವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ಅವರು ಮಾತನಾಡಿದರು.

ಜೂ.12ರಂದು ಜಿಲ್ಲಾ ಕೇಂದ್ರ ಸೇರಿದಂತೆ ಎಲ್ಲಾ ತಾಲೂಕುಗಳಲ್ಲಿ ಸಹ ವಿಶ್ವ ಬಾಲ ಕಾರ್ಮಿಕ ಪದ್ಧತಿಯ ವಿರೋಧಿ ದಿನವನ್ನು ಆಚರಣೆ ಮಾಡಬೇಕು. ಈ ಬಗ್ಗೆ ಆಯಾ ತಹಸೀಲ್ದಾರರು ಆಯಾ ತಾಲೂಕುಗಳಲ್ಲಿ ಸಿದ್ಧತೆ ಕೈಗೊಳ್ಳುವಂತೆ ಸೂಚಿಸಬೇಕು ಎಂದರು.

ಜಿಲ್ಲೆಯ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಸೇರಿದಂತೆ ಎಲ್ಲಾ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿನ ಕಸ ವಿಲೆವಾರಿ ವಾಹನಗಳಲ್ಲಿ ಉಚಿತವಾಗಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿ ಕುರಿತು ಜಿಂಗಲ್ಸ್ ಪ್ರಸಾರಕ್ಕೆ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–ಯಂದು ಪ್ರತಿಜ್ಞಾವಿಧಿ ಸ್ವೀಕರಿಸಲು ಎಲ್ಲ ಇಲಾಖೆಗಳಿಗೆ ಸುತ್ತೋಲೆ ಹೊರಡಿಸಿ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಎ.ಮೌನೇಶ್ ಅವರು ಮಾತನಾಡಿ, ಜಿಲ್ಲಾ ಕೇಂದ್ರದಲ್ಲಿ ಜೂ.12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಅಂದು ಜಾಗೃತಿ ಜಾಥಾವೂ ನಡೆಯಲಿದೆ. ಈ ವೇಳೆ ಆಟೋ ಮೈಕಿಂಗ್ ಮೂಲಕ ಘೋಷಣೆಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಾಲಕಾರ್ಮಿಕ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಲು ಜಾಗೃತಿ ಮೂಡಿಸಲಾಗುವುದು. ಕಾರ್ಯಕ್ರಮಕ್ಕೆ ಆಗಮಿಸಿದ ಮಕ್ಕಳಿಗೆ ಲಘು–ಉಪಹಾರ ಮತ್ತು ಹಾಲು ವಿತರಿಸುವ ಸಂಬಂಧ ಕೆಎಂಎಫ್‌ಗೆ ಪತ್ರ ಬರೆಯಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕತೆಯಿಂದ ಬಿಡುಗಡೆಗೊಂಡು ಶಾಲಾ ಮುಖ್ಯವಾಹಿನಿಗೆ ಸೇರಿಸಿರುವ ಮಕ್ಕಳು ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ಧಪ್ಪ ಖೈನೂರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ : ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಚಿತ್ರದುರ್ಗ : ಹಿಂದುಳಿದ ವರ್ಗಗಳ ಪ್ರವರ್ಗ–1ರ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಬಯಸುವವರಿಗೆ ಅನುಕೂಲವಾಗುವಂತೆ 2025–26ನೇ ಸಾಲಿನಲ್ಲಿ ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಡಿಯಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವ ಮನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲೆಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24 ಹಾಗೂ 2024–25ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಏttp://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.kaad.karnataka.gov.in

ಜೂ.10 ರಂದು ವಿಶೇಷ ಚೇತನರಿಗೆ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮ

ಬಳ್ಳಾರಿ : ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಕೇಂದ್ರ ಸರ್ಕಾರದ ವಿಶೇಷ ಆಡಿಪ್ ಯೋಜನೆಯಡಿ ಜೂ.10 ರಂದು ಬೆಳಿಗ್ಗೆ 11ಕ್ಕೆ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಘನ ಉಪಸ್ಥಿತಿ ಇರುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ. ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ. ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಹ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಉಪನಿರ್ದೇಶಕ ವಿಜಯಕುಮಾರ್ ಕೆ.ಹೆಚ್., ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಸೇರಿದಂತೆ ಜಿಲ್ಲಾ ವಿಕಲಚೇತನರ ಪುರ್ನವಸತಿ ಕೇಂದ್ರ ಹಾಗೂ ವಿಕಲಚೇತನರು ಮತ್ತು ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ–ಸಂಸ್ಥೆಗಳು ಮತ್ತು ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

ಬಳ್ಳಾರಿ ಜಿಲ್ಲೆಯಲ್ಲಿ ಹೆಲ್ಮೆಟ್ ಬಳಕೆ ಕಡ್ಡಾಯ; ವಿನಾಯಿತಿ ಇಲ್ಲ

ಜೀವ ಮತ್ತು ಜೀವನಕ್ಕಾಗಿ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ: ಎಸ್ಪಿ ಡಾ.ಶೋಭಾರಾಣಿ

ಬಳ್ಳಾರಿ: ಜೀವ ಮತ್ತು ಜೀವನ ಅಮೂಲ್ಯವಾದುದು. ಹಾಗಾಗಿ ಪ್ರತಿಯೊಬ್ಬ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಹೇಳಿದರು.

ನಗರದ ಕನಕದುರ್ಗಮ್ಮ ದೇವಸ್ಥಾನ ವೃತ್ತದಲ್ಲಿ ಎಸ್ಪಿ ಶುಕ್ರವಾರ ಆಯೋಜಿಸಲಾಗಿದ್ದ ಸಾರ್ವಜನಿಕರ ಸುರಕ್ಷತೆಗಾಗಿ ಹೆಲ್ಮೆಟ್ ಜಾಗೃತಿ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಹೆಲ್ಮೆಟ್ ಮತ್ತು ಗುಲಾಬಿ ಹೂ ವಿತರಿಸಿ ಅವರು ಮಾತನಾಡಿದರು.

ಅಪಘಾತಗಳ ಪೈಕಿ ದ್ವಿಚಕ್ರವಾಹನಗಳ ಅಪಘಾತವೇ ಹೆಚ್ಚು. ಅದರಲ್ಲಿ ಹೆಲ್ಮೆಟ್ ಧರಿಸದೆ ಸಾವನಪ್ಪಿರುವರ ಸಂಖ್ಯೆ ಹೇರಳವಾಗಿದೆ. ಆ ವೇಳೆ ತಲೆಗೆ ಪೆಟ್ಟಾಗಿ ಸಾವನ್ನಪ್ಪಿರುವವರು ಹೆಚ್ಚಾಗಿದ್ದಾರೆ. ಇದಕ್ಕೆ ಹೆಲ್ಮೆಟ್ ಧರಿಸದಿರುವುದೇ ಮುಖ್ಯ ಕಾರಣ. ಹಾಗಾಗಿ ನಿಮ್ಮ ಮನೆಯವರು ಹಾಗೂ ನಿಮ್ಮನ್ನು ನಂಬಿದವರಿಗಾಗಿ ಹೆಲ್ಮೆಟ್ ಅನ್ನು ಕಡ್ಡಾಯವಾಗಿ ಧರಿಸಲೇಬೇಕು ಎಂದು ಹೇಳಿದರು.

ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸುವುದರಿಂದ ಸಂಭವನೀಯ ಅಪಘಾತಗಳಿಂದ ತಲೆಗೆ ಪೆಟ್ಟಾಗುವುವುದು ತಪ್ಪುತ್ತದೆ. ಪೊಲೀಸರು ನೀಡುವ ಸೂಚನೆಗಳನ್ನು ಅಗತ್ಯವಾಗಿ ಪಾಲಿಸಬೇಕು. ಹೆಲ್ಮೆಟ್ ಧರಿಸದೆ ವಾಹನ ಚಲಾಯಿಸಿದರೆ ಸ್ಥಳದಲ್ಲಿಯೇ ರೂ.500 ದಂಡ ತೆರಬೇಕಾಗುತ್ತದೆ. 18 ವರ್ಷದ ಒಳಗಿನವರು ವಾಹನ ಚಲಾಯಿಸುವುದು ಕೂಡ ಅಪರಾಧ. ಹಾಗಾಗಿ ಕಡ್ಡಾಯವಾಗಿ ಸಂಚಾರ ನಿಯಮ ಪಾಲನೆ ಮಾಡಬೇಕು ಎಂದರು.

ಸುರಕ್ಷತೆಗಾಗಿ ಹೆಲ್ಮೆಟ್ ಧರಿಸೋಣ:

ದ್ವಿಚಕ್ರವಾಹನ ಚಲಾಯಿಸುವ ಪ್ರತಿಯೊಬ್ಬರೂ ಹೆಲ್ಮೆಟ್ ಬಳಸುವ ರೂಢಿಯಾಗಬೇಕೆಂದರೆ ಅಧಿಕಾರಿಗಳು ಸೇರಿದಂತೆ ನಾವೆಲ್ಲರೂ ನಮ್ಮ ಸುರಕ್ಷತೆಗಾಗಿ ಹೆಲ್ಮೆಟ್ ಧರಿಸೋಣ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾಧ್ಯಮ ಪ್ರತಿನಿಧಿಗಳ ಸಂವಾದದಲ್ಲಿ ಹೇಳಿದರು.

ಜಿಲ್ಲೆಯಲ್ಲಿ ಅತಿಯಾಗ ವೇಗದಿಂದ ವಾಹನ ಚಾಲನೆ, ಮದ್ಯ ಸೇವಿಸಿ–ವಾಹನ ಚಾಲನೆ ಮತ್ತು ಸಂಚಾರ ನಿಯಮ ಉಲ್ಲಂಘನೆಯಿಂದ ಅಪಘಾತ ಮತ್ತು ಸಾವು ಸಂಭವಿಸುತ್ತಿವೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಂದಿನಿಂದಲೇ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು ಹಾಗೂ ಹಿಂಬದಿಯ ಸವಾರರು ಸಹ ತಪ್ಪದೇ ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು.

ಹೆಲ್ಮೆಟ್ ಧರಿಸುವ ಕುರಿತು ನಮ್ಮಿಂದಲೇ ಪ್ರಾರಂಭಿಸಿದರೆ ಸಾರ್ವಜನಿಕರು ಸಹ ದ್ವಿ–ಚಕ್ರ ಸಂಚಾರದಲ್ಲಿ ಸುರಕ್ಷತೆಗಾಗಿ ಹೆಲ್ಮೆಟ್ ಬಳಕೆ ಕುರಿತು ಸಂದೇಶ ರವಾನಿಸಿದಂತಾಗುತ್ತದೆ. ಹಾಗಾಗಿ ಎಲ್ಲರೂ ತಪ್ಪದೇ ಹೆಲ್ಮೆಟ್ ಬಳಸೋಣ ಎಂದರು.

ಮೂರು ನಾಲ್ಕು ತಿಂಗಳಿಂದ ಮತ್ತೆ ಕಾಣೆಯಾದ ಸಿಟಿ ಬಸ್

ಅಧಿಕಾರಿಗಳ ಜಾಣತನಕ್ಕೆ ಮೆಚ್ಚಬೇಕು : ಎಚ್ ಕೆ ಎಸ್ ಸ್ವಾಮಿ

ಚಿತ್ರದುರ್ಗ : ನಗರದ ಐಯಡಿಪಿ ಲೇಔಟ್ ನಿಂದ ಕೊಡೆಯ್ಯನಟ್ಟಿಗೆ ಬಹಳ ದಿನಗಳು ಸಾರ್ವಜನಿಕರು ಪ್ರಯತ್ನಪಟ್ಟು, ನಗರ ಸಾರಿಗೆ ಇಲಾಖೆಗೆ, ಜಿಲ್ಲಾಡಳಿತಕ್ಕೆ, ಪತ್ರಿಕೆಗಳಲ್ಲಿ, ಟಿವಿ ಮಾಧ್ಯಮಗಳಲ್ಲಿ ದೂರಿನ ಮೇಲೆ ದೂರನ್ನು ನೀಡಿ, ಒಂದೇ ಒಂದು ಸಿಟಿ ಬಸ್ಸನ್ನು, ಅದು ಅರ್ಧ ದಿವಸ ಮಾತ್ರ ಓಡಾಡುವಷ್ಟರ ಮಟ್ಟಿಗೆ ಅನುಮತಿ ಪಡೆದು, ಜನರಿಗೆ ಅನುಕೂಲವಾಗಲೆಂದು, ಸಾಕಷ್ಟು ಶ್ರಮಪಟ್ಟು, ಕಚೇರಿಯಿಂದ ಕಚೇರಿಗೆ ಅಲೆದಾಡಿ, ಅನುಮತಿ ಪಡೆಯಲಾಗಿತ್ತು, ಆದರೆ ಕಳೆದ ಮೂರು ನಾಲ್ಕು ತಿಂಗಳಿಂದ ಈ ಏಕೈಕ ಸಿಟಿ ಬಸ್ ರಸ್ತೆಯಿಂದ ಕಾಣೆ–ಯಾಗಿದ್ದು, ಅದು ಎಲ್ಲಿಗೆ ಹೋಯಿತು, ಯಾವಾಗ ಕಾಣೆಯಾಯಿತು ಎಂದು ಜನರು ಹುಡುಕಾಡಲಾರಂಭಿಸಿದ್ದಾರೆ, ಅದು ರಸ್ತೆಯಿಂದ ಕಣ್ಮರೆಯಾಗಿದ್ದು ಜನರಿಗೆ ಅರಿವಿಗೆ ಬಂದಿಲ್ಲ. ಅದು ಜನರ ಅರಿವಿಗೆ ಬಾರದ ರೀತಿಯಲ್ಲಿ, ತುಂಬಾ ಚಾಣಾಕ್ಷಣತನದಿಂದ ಕಣ್ಮರೆ ಮಾಡಲಾಗಿದೆ, ಇದ್ದ ಏಕೈಕ ಸಿಟಿ ಬಸ್ಸನ್ನ ಜನರಿಂದ ದೂರ ಮಾಡಿ, ಜನರಿಗೆ ಅನಾನುಕೂಲ ಕಲ್ಪಿಸಿ, ಅದು ಯಾವ ರೀತಿ ಅಧಿಕಾರಿಗಳು ನೆಮ್ಮದಿ ಪಡೆಯುತ್ತಿದ್ದ

ಕೊಪ್ಪಳದ ಕೇಸರ್ ಮಾವಿಗೆ ಅಂತಾರಾಷ್ಟ್ರೀಯ ಮನ್ನಣೆ!

ಕೊಪ್ಪಳ: ಕೊಪ್ಪಳದ ಮಾವು ಕೃಷಿಕರಿಗೆ ಬಂಪರ್ ಬೇಡಿಕೆ ಬಂದಿದ್ದು, ಇಲ್ಲಿನ ಮಾವಿನ ಹಣ್ಣುಗಳಿಗೆ ಅಂತಾರಾಷ್ಟ್ರೀಯ ಮನ್ನಣೆ ದೊರೆತಿದೆ.

ಕೊಪ್ಪಳ ಜಿಲ್ಲೆಯ ಕಲ್ಲು ತಾವರಗೇರಾ, ಕಾಮನೂರು, ಇಂದರಗಿ, ಜಬ್ಬಲಗೂಡ, ಬೂದಗುಂಪಾ, ವಡಲುಗಲ್ಲು, ವನಬಳ್ಳಾರಿ, ಹಟ್ಟಿ, ಗಿಣಿಗೇರಾ, ಇರಕಲ್ಲಗಡ, ಹನುಮನಬಟ್ಟಿ, ಮಾಟಗಲ್ಲು, ಹಾಲಹಳ್ಳಿ, ಭೀಮನೂರು, ಗುಲ್ಡಹಳ್ಳಿ ಗ್ರಾಮಗಳು ಒಂದೊಂದು ವಿಶಿಷ್ಟ ಲಕ್ಷಣವನ್ನು ಹೊಂದಿವೆ. ಕೊಪ್ಪಳದ ಈ 15 ಗ್ರಾಮಗಳ ಪ್ರತಿ ಮನೆಯಲ್ಲೂ ಮಾವು ಬೆಳೆಯುತ್ತಿದ್ದು, ಸಾವಿರಾರು ಮಾವು ಬೆಳೆಗಾರರನ್ನು ಹೊಂದಿರುವ ಉತ್ತರ ಕರ್ನಾಟಕದ ಮೊದಲ ಜಿಲ್ಲೆಯಾಗಿದೆ.

ಈ ಹಳ್ಳಿಗಳಲ್ಲಿ ಋತುಮಾನಕ್ಕೆ ತಕ್ಕಂತೆ ಹಣ್ಣುಗಳನ್ನು ಮಾತ್ರ ಬೆಳೆದು ಭಾರಿ ಲಾಭ ಗಳಿಸುವ ರೈತರಿದ್ದಾರೆ. 2010 ರಲ್ಲಿ, ಇಲ್ಲಿ ರಫ್ತು ಮಾಡಲಾಗುತ್ತದೆ. ಉತ್ತಮ ಆದಾಯವನ್ನು ತರುವುದರಿಂದ ಕೇಸರ್ ಮಾವು ಪ್ರತಿಯೊಬ್ಬ ಬೆಳೆಗಾರನ ಪ್ರಮುಖ ಆಯ್ಕೆಯಾಗಿದೆ.

ತಾವರಗೇರಾದ ಕೆಲವು ರೈತರು, "ತಾವರಗೇರಾದ ಸುತ್ತಮುತ್ತಲಿನ 15 ಕ್ಕೂ ಹೆಚ್ಚು ಹಳ್ಳಿಗಳ ಮೂಲಕ

ಮಾವು ಬೆಳೆಗಾರರು ಬಹಳ ಕಡಿಮೆ ಇದ್ದರು. ಆದಾಗ್ಯೂ, ಕೊಪ್ಪಳ ಜಿಲ್ಲಾ ತೋಟಗಾರಿಕೆ ಇಲಾಖೆಯು ಕೃಷಿ ಮೇಳಗಳನ್ನು ಆಯೋಜಿಸಲು, ಕಾರ್ಯಾಗಾರಗಳು ಮತ್ತು ವಿಶೇಷ ಅವಧಿಗಳ ಮೂಲಕ ರೈತರಿಗೆ ತರಬೇತಿ ನೀಡಲು ಮತ್ತು ಕ್ಷೇತ್ರ ತರಬೇತಿ ಕಾರ್ಯಕ್ರಮಗಳಲ್ಲಿ ಅವರನ್ನು ತೊಡಗಿಸಿಕೊಳ್ಳಲು ಪ್ರಾರಂಭಿಸಿದಾಗ, ಅನೇಕರು ಮಾವಿನ ಕೃಷಿಗೆ ಬದಲಾದರು. ಇಲಾಖೆಯು ಅವರ ಮಾವಿನ ಫಸಲನ್ನು ಮಾರಾಟ ಮಾಡಲು ಸಹಾಯ ಮಾಡಲು ಪ್ರಾರಂಭಿಸಿದಾಗ, ಉತ್ತಮ ಲಾಭವನ್ನು ತಂದುಕೊಟ್ಟಾಗ, ಸಾವಿರಾರು ಜನರು ಮಾವು ಬೆಳೆಯಲು ಪ್ರಾರಂಭಿಸಿದ್ದಾರೆ.

ಈಗ, ಜಿಲ್ಲೆಯ ಮಾವಿನ ಹಣ್ಣುಗಳಿಗೆ ನೆರೆಯ ರಾಜ್ಯಗಳಲ್ಲಿಯೂ ಬೇಡಿಕೆಯಿದೆ, ಕೇಸರ್ ಮಾವಿನಹಣ್ಣುಗಳ ವಿಧವನ್ನು ವಿದೇಶಗಳಿಗೆ ಪ್ರಯಾಣಿಸಿದರೆ, ಎಲ್ಲಾ ಮನೆಗಳಲ್ಲಿ ಮಾವು ಬೆಳೆಗಾರರನ್ನು ಕಾಣಬಹುದು.

ಪ್ರತಿಯೊಬ್ಬರೂ ಮಾವು ಬೆಳೆಗಾರರಾಗಿರುವುದರಿಂದ ಜನರು ಅವರನ್ನು 'ಮಾವು ಗ್ರಾಮಸ್ಥರು' (ಅಂದರೆ 'ಮಾವಿನ ಗ್ರಾಮಸ್ಥರು') ಎಂದು ಕರೆಯುತ್ತಾರೆ.

"ಮೊದಲು, ನಾವೆಲ್ಲರೂ ನಮ್ಮ ಹೊಲಗಳಿಂದ ಉತ್ತಮ ಇಳುವರಿಯನ್ನು ಪಡೆಯಲು ಹೆಣಗಾಡಿದ್ದೇವೆ, ಆದರೆ ಈಗ ಹಣ್ಣು ನಮಗೆ ಆಶೀರ್ವಾದ ಮಾಡಿದೆ. ನಮಗೆ ಉತ್ತಮ ಲಾಭ ಸಿಗುತ್ತಿದೆ. ಇತರ ಜಿಲ್ಲೆಗಳ ರೈತರು ನಮ್ಮ ಮಾವಿನ ತೋಟಗಳಿಗೆ ಭೇಟಿ ನೀಡಿ ಎದ್ದುಕಾಣುವ ತಳಿಗಳನ್ನು ಬೆಳೆಸುವ ಬಗ್ಗೆ ಜ್ಞಾನವನ್ನು ಸಂಗ್ರಹಿಸುತ್ತಿದ್ದಾರೆ."

ಕೊಪ್ಪಳ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ ಈ ಬಗ್ಗೆ ಮಾತನಾಡಿದ್ದು, "ನಾವು ರೈತರಿಗೆ ಸೆಷನ್ ಸಂಕಿರಣಗಳು ಮತ್ತು ಯೋಜನೆಗಳಂತಹ ಹಲವು ವೇದಿಕೆಗಳನ್ನು ಒದಗಿಸಿದ್ದೇವೆ ಮತ್ತು ಅವುಗಳನ್ನು ಕಾರ್ಯಗತಗೊಳಿಸಲು ಸಹಾಯ ಮಾಡಿದ್ದೇವೆ. ನಾವು ತಜ್ಞರನ್ನು ಹಲವಾರು ತೋಟಗಳಿಗೆ ಕರೆದೊಯ್ದು ರೈತರು ಸಸಿಗಳನ್ನು ಖರೀದಿಸಲು ಮತ್ತು ಅವುಗಳನ್ನು ಬೆಳೆಸಲು ಸಹಾಯ ಮಾಡಿದ್ದೇವೆ. ನಮ್ಮ ತಂಡ ಮಾವು ಬೆಳೆಗಾರರು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಸಹ ಸಹಾಯ ಮಾಡಿತು. ಆದ್ದರಿಂದ, ಅನೇಕ ಆಸಕ್ತ ರೈತರು ನಮ್ಮ ಬಳಿಗೆ ಬಂದರು, ಮತ್ತು ಈಗ, ಕೊಪ್ಪಳದ 15 ಕ್ಕೂ ಹೆಚ್ಚು ಹಳ್ಳಿಗಳು ಮಾವು ಬೆಳೆಗಾರರಿಂದ ತುಂಬಿವೆ. ಯಾವುದೇ ರೈತರು ನಮ್ಮನ್ನು ಭೇಟಿ ಮಾಡಿದರೆ, ನಾವು ಅವರಿಗೆ ಮಾರ್ಗದರ್ಶನ ನೀಡುತ್ತೇವೆ. 'ಕೊಪ್ಪಳ ಕೇಸರ್' ಅಂತರರಾಷ್ಟ್ರೀಯ ಬ್ರಾಂಡ್ ಆಗಿ ಹೊರಹೊಮ್ಮಿದೆ ಎಂದು ನಮಗೆ ಸಂತೋಷವಾಗಿದೆ" ಎಂದು ಹೇಳಿದ್ದಾರೆ.

ಮಾವು ಮೇಳದಲ್ಲಿ ಗಮನ ಸೆಳೆದ 'ಸಕ್ಕರೆ ಗುತ್ತಿ'

ಬೆಂಗಳೂರು: ಕೇವಲ ಸಿಹಿಯಾಗಿರಬೇಕಿದ್ದ ಈ ವರ್ಷದ ಮಾವಿನ ಋತು ಹವಾಮಾನ ವೈಪರೀತ್ಯದಿಂದಾಗಿ ಸಿಹಿ-ಕಹಿಯಾಗಿ ಮಾರ್ಪಟ್ಟಿದೆ. ಈ ಸವಾಲುಗಳ ಹೊರತಾಗಿಯೂ, ನಿರ್ದಿಷ್ಟ ರೀತಿಯ ಮಾವು ಬಹಳ ಜನಪ್ರಿಯವಾಗಿದ್ದು, ಲಾಲ್ಬಾಗ್ ಉದ್ಯಾನದಲ್ಲಿ ನಡೆದ ಮಾವು ಮೇಳದಲ್ಲಿ ಹೆಚ್ಚಿನ ಗಮನ ಸೆಳೆದಿದೆ.

ಸ್ಥಳೀಯವಾಗಿ 'ಶುಗರ್ ಬೇಬಿ' ಎಂದು ಕರೆಯಲ್ಪಡುವ ಸಕ್ಕರೆ ಗುತ್ತಿ ಎಂಬ ಮಾವು ಈ ಋತುವಿನಲ್ಲಿ ಶೋ ಟಾಪರ್ ಆಗಿದೆ. ಚಿಕ್ಕದಾದ, ದುಂಡಗಿನ ಮತ್ತು ಹಳದಿ ಬಣ್ಣದ ಮಾವು ತಮ್ಮ ಅಸಾಮಾನ್ಯ ರುಚಿಯಿಂದಾಗಿ ಮಹಿಳೆಯರು ಮತ್ತು ಮಕ್ಕಳ ಮೆಚ್ಚಿನ ಮಾವಾಗಿದೆ ಎಂದು ಮಾವು ಮೇಳದ ಮಾರಾಟಗಾರರು ಹೇಳಿದ್ದಾರೆ.

ಟಿಎಎಸ್‌ಇ ಜೊತೆಗೆ ಮಾತನಾಡಿದ ಮಾರಾಟಗಾರ ಸಾಮ್ರಾಟ್ ಗೌಡ, ಈ ತಳಿ ಯಾವಾಗಲೂ ಮಾರುಕಟ್ಟೆಯಲ್ಲಿದ್ದರೂ, ಈ ಋತುವಿನಲ್ಲಿ ಅದರ ಮಾರಾಟವು ತೀವ್ರ ಏರಿಕೆಯಾಗಿದೆ. ಇದಕ್ಕೆ ಪ್ರಮುಖ ಕಾರಣವೆಂದರೆ, ಈ ಸಕ್ಕರೆ ಗುಟ್ಲೆ ಮಾವಿನಹಣ್ಣುಗಳು ಅತ್ಯಂತ ಸಿಹಿಯಾಗಿರುತ್ತವೆ ಮತ್ತು ಮಕ್ಕಳು ಸುಲಭವಾಗಿ ತಿನ್ನಬಹುದು ಎನ್ನುತ್ತಾರೆ.

ಅವುಗಳನ್ನು ಕತ್ತರಿಸಿ ಅಥವಾ ಹೋಳು ಮಾಡಬೇಕಾಗಿಲ್ಲ. ಕ್ಯಾಂಡಿಯಂತೆ ತಿನ್ನಬಹುದು. ನಾವು ಅವುಗಳನ್ನು ಕೆಜಿಗೆ 180 ರೂ.ಗೆ ಮಾರಾಟ ಮಾಡುತ್ತಿದ್ದೇವೆ. ಈ ಮಾವುಗಳು ತಮಿಳುನಾಡು ಮತ್ತು ಕರ್ನಾಟಕಕ್ಕೆ ಸ್ಥಳೀಯವಾಗಿದ್ದು, ಮೇಳದಲ್ಲಿ, ಮಾರಾಟಗಾರರು ನಿಯಮಿತವಾಗಿ 80-100 ಕೆಜಿಯಷ್ಟು ಮಾರಾಟ ಮಾಡುತ್ತಾರೆ. ಈ ಮಾವು ಅನಿರೀಕ್ಷಿತ ಲಾಭವನ್ನು ತರುತ್ತಿದೆ ಎಂದರು.

ಸ್ಟಾಲ್ ವ್ಯವಸ್ಥೆಯಿಂದ ರೈತರು ಸಂತೋಷಪಡದಿದ್ದರೂ, ಮಲ್ಲಿಕಾ, ರಸಪುರಿ, ಮಾಲ್ಗೋವಾ, ದಶೇರಿ, ಕೇಸರಿ, ಇಮಾಮ್ ಪಸಂದ್ ಮತ್ತು ಇನ್ನಿತರ ಜನಪ್ರಿಯ ತಳಿಗಳನ್ನು ಖರೀದಿಸಲು ಜನರು ವಾರಾಂತ್ಯದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಬರುತ್ತಿದ್ದಾರೆ.

ಈ ವರ್ಷ ಮೇಳದಲ್ಲಿ ಮತ್ತೊಂದು ಆಕರ್ಷಣೆಯೆಂದರೆ ಕರಿ ಇಶಾದ್, ಈಗ ಜಿಐ ಟ್ಯಾಗ್ ಮಾಡಲಾದ ಮಾವು ಕೆಜಿಗೆ 300 ರೂ.ಗೆ ಮಾರಾಟವಾಗುತ್ತಿದೆ ಮತ್ತು ಗ್ರಾಹಕರ ಚೀಲ ಸೇರುತ್ತಿದೆ. ಗೋಕರ್ಣದ ಗಣೇಶ ಗುನಗಾ ಅವರು ಕಳೆದ 25 ವರ್ಷಗಳಿಂದ ಈ ತಳಿಯ ಮಾರಾಟ ಮಾಡುತ್ತಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ವ್ಯಾಪಾರ ಉತ್ತಮವಾಗಿದೆ. ತಲಾ 10 ಕೆಜಿ ತೂಕದ ಬುಟ್ಟಿಯನ್ನಾಗಿ ಮಾಡಲಾಗುತ್ತದೆ. ಇದುವರೆಗೆ 300 ಬುಟ್ಟಿಗಳನ್ನು ಮಾರಾಟ ಮಾಡಿರುವುದಾಗಿ ತಿಳಿಸುತ್ತಾರೆ.

ಹವಾಮಾನ ವೈಪರೀತ್ಯದ ಹೊಡೆತ

ಕೆಲವು ಮಾರಾಟಗಾರರು ಈ ಋತುವಿನಲ್ಲಿ ಲಾಭ ಅಥವಾ ನಷ್ಟವನ್ನು ಮಾಡುತ್ತಿಲ್ಲ. ಶೇ 50-70ರಷ್ಟು ಇಳುವರಿ ಕಡಿಮೆಯಾಗಿದೆ ಎಂದು ಕೋಲಾರದ ಶ್ರೀನಿವಾಸಪುರದ ರೈತ ನವ್ಯಶ್ರೀ ವಿವರಿಸಿದರು. 'ಬರದಿಂದಾಗಿ ಇಳುವರಿ ಕುಂಠಿತವಾಗಿದೆ. ಓರ್ವ ಆಳಿಗೆ ದಿನಕ್ಕೆ 700 ರೂ. ಖರ್ಚು ಮಾಡುತ್ತಿದ್ದು, ಅವರು ಕೀಳುವ ಬಹುತೇಕ ಮಾವಿನ ಕಾಯಿಗಳು ಹಾಳಾಗಿವೆ ಮತ್ತು ಬಿಸಿಲಿಗೆ ಸುಟ್ಟು ಹೋಗಿರುತ್ತವೆ. ಸಾಗಣೆ ಸಮಯದಲ್ಲಿಯೂ ಹಲವಾರು ಟನ್ಗಳಷ್ಟು ಮಿತಿಮೀರಿದ ಮಾವಿನಹಣ್ಣುಗಳು ವ್ಯರ್ಥವಾಗುತ್ತಿವೆ' ಎಂದು ಅವರು ಹೇಳಿದರು.

ಮತ್ತೊಬ್ಬ ಮಾರಾಟಗಾರ ಕಾರ್ತಿಕ್ ಎಂಎನ್, ತಡವಾದ ಸೀಸನ್ ಮೇಳಕ್ಕೆ ಹೆಚ್ಚಿನ ಜನರನ್ನು ಕರೆತರುತ್ತಿದೆ. ಆದಾಗ್ಯೂ, ಅನೇಕರು ಚೌಕಾಸಿ ಮಾಡುತ್ತಾರೆ. ಕಡಿಮೆ ಇಳುವರಿಯಿಂದಾಗಿ, ನಾವು ಮಾವಿನ ಹಣ್ಣನ್ನು ಸ್ವಲ್ಪ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದೇವೆ. ಆದರೆ, ಗ್ರಾಹಕರು ಸ್ವಲ್ಪಮಟ್ಟಿಗೆ ಚೌಕಾಸಿ ಮಾಡುತ್ತಾರೆ. ಈ ದರದಲ್ಲಿ, ನಾವು ನಮ್ಮ ಒಟ್ಟು ವೆಚ್ಚವನ್ನು ಸಹ ಪಡೆಯಲು ಆಗುವುದಿಲ್ಲ ಎನ್ನುತ್ತಾರೆ.

ಒಂದು ಸಣ್ಣ ಅಭ್ಯಾಸ, ದೊಡ್ಡ ಪ್ರಯೋಜನ..!

ಸಂಜೆಯ ನಂತರ ದೇಹದಲ್ಲಿನ ಚಯಾಪಚಯ (Metabolism) ಕ್ರಿಯೆಯ ಪ್ರಮಾಣ ಕಡಿಮೆ ಇರುತ್ತದೆ. ತಿಂದ ಆಹಾರ ಸರಿಯಾಗಿ ಜೀರ್ಣವಾಗದಿದ್ದರೆ ಅದು ದೇಹದಲ್ಲಿ ಕೊಬ್ಬಾಗಿ ಬದಲಾಗುವ ಅಪಾಯವಿದೆ. ಇದರಿಂದ ತೂಕ ಹೆಚ್ಚಾಗುವುದು, ಅಜೀರ್ಣ ಮತ್ತು ಹೊಟ್ಟೆ ಉಬ್ಬರದಂತಹ ಸಮಸ್ಯೆಗಳಿಗೆ ದಾರಿ ಮಾಡಿಕೊಡುತ್ತದೆ. ಹಾಗಾಗಿ ನಾವು ರಾತ್ರಿಯ ಊಟವನ್ನು ಬೇಗ ಮಾಡಿದ್ರೆ, ಉತ್ತಮ ಆರೋಗ್ಯ ಕಾಡಪಾಡಿಕೊಳ್ಳಬಹುದು.

ರಾತ್ರಿ ವಿಶ್ರಾಂತಿ ಬಯಸುತ್ತದೆ..

ರಾತ್ರಿ ವೇಳೆ ನಮ್ಮ ದೇಹವು ವಿಶ್ರಾಂತಿ ಬಯಸುತ್ತದೆ. ನಾವು ತಡವಾಗಿ ಊಟ ಮಾಡಿದಾಗ ದೇಹವು ವಿಶ್ರಾಂತಿಯ ಮೇಲೆ ಸಂಪೂರ್ಣವಾಗಿ ಗಮನಹರಿಸಲು ಸಾಧ್ಯವಾಗುವುದಿಲ್ಲ. ಆದರೆ ಮೊದಲೇ ಊಟ ಮಾಡುವುದರಿಂದ ದೇಹವು ಆರಾಮವಾಗಿ ವಿಶ್ರಾಂತಿ ಪಡೆಯಲು ಅನುವು ಮಾಡಿಕೊಡುತ್ತದೆ. ಮಾತ್ರವಲ್ಲ, ನಿದ್ರೆಯು ಕೂಡ ತುಂಬಾ ಚೆನ್ನಾಗಿ ಆಗುತ್ತದೆ. ಒಳ್ಳೆಯ ನಿದ್ರೆ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ.

ಇದರಿಂದ ಆರೋಗ್ಯ ಸುಧಾರಿಸುತ್ತದೆ.

ದೇಹದಲ್ಲಿರುವ ಲೆಪ್ಟಿನ್ ಮತ್ತು ಗ್ರೆಲಿನ್ ಹಾರ್ಮೋನುಗಳು (leptin and obesity) ಆಹಾರ ಸೇವಿಸಿದ ನಂತರ ಹಸಿವು ಮತ್ತು ಹೊಟ್ಟೆ ತುಂಬುವಿಕೆಯ ಭಾವನೆ ನಿಯಂತ್ರಿಸುತ್ತವೆ.

ತಡವಾಗಿ ಊಟ ಮಾಡುವುದರಿಂದ ಈ ಹಾರ್ಮೋನುಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಇದು ನಿದ್ರೆಗೆ ಅಗತ್ಯವಾದ ಮೆಲಟೋನಿನ್ (melatonin) ಎಂಬ ಹಾರ್ಮೋನ್ ಕಾರ್ಯನಿರ್ವಹಣೆಯನ್ನು ಅಡ್ಡಿಪಡಿಸುತ್ತದೆ. ಇದರಿಂದ ರಾತ್ರಿ ನಿದ್ರೆ ಬರದೆ ಪರದಾಡಬೇಕಾಗುತ್ತದೆ.

ಅಲ್ಲದೇ ರಾತ್ರಿ ವೇಳೆ ಹೆಚ್ಚಾಗಿ ಕಾರ್ಬೋಹೈಡ್ರೇಟ್ ಇರುವ ಪದಾರ್ಥ ಸೇವಿಸೋದ್ರಿಂದ ಇದು ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ಹೆಚ್ಚಿಸುತ್ತದೆ. ಟೈಪ್ 2 ಮಧುಮೇಹ ಬರುವ ಅಪಾಯ ಹೆಚ್ಚಿಸುತ್ತದೆ. ಹಾಗಿದ್ದೂ ನೀವು ನಿಮ್ಮ ಊಟ ಬೇಗನೆ ಮುಗಿಸಿದರೆ ಇಂಥ ಸಮಸ್ಯೆ ಕಡಿಮೆ ಪ್ರಮಾಣದಲ್ಲಿ ಇರುತ್ತದೆ.

ಎಷ್ಟು ಗಂಟೆಗೆ ಊಟ ಮಾಡಬೇಕು..?

ಸಂಜೆ 7 ಗಂಟೆಯ ಮೊದಲು ಊಟ ಮುಗಿಸುವುದು ಉತ್ತಮ ಅಭ್ಯಾಸ. ಇದರಿಂದ ಬೆಳಗ್ಗೆ ಬೇಗನೆ ಎದ್ದು ಆರೋಗ್ಯಕರ ಉಪಹಾರ ಸೇವಿಸಲು ಸಹಾಯ ಆಗುತ್ತದೆ. ಈ ರೀತಿಯ ಅಭ್ಯಾಸ ದೇಹದ ಸದೃಢಕ್ಕೆ ಮತ್ತು ದಿನಚರಿಯ ಅಗತ್ಯ ನಿಯಮಗಳ ಅನುಸರಿಸಲು ಸಹಾಯ ಮಾಡ್ತದೆ.

ಹೆರಿಗೆ ಬಳಿಕ ಕೂದಲು ಉದುರುತ್ತಿದೆಯೇ? ನಿಮ್ಮ ಆಹಾರದಲ್ಲಿ ಈ ವಸ್ತುಗಳನ್ನು ಸೇರಿಸಿ!

ಹೆರಿಗೆಯ ನಂತರ ಮಹಿಳೆಯರು ಎದುರಿಸುವ ಸಾಮಾನ್ಯ ಸಮಸ್ಯೆ ಕೂದಲು ಉದುರುವುದು. ಈ ಸಮಸ್ಯೆ ನಿಧಾನವಾಗಿ ಪ್ರಾರಂಭವಾಗುತ್ತದೆ ಮತ್ತು ಇದ್ದಕ್ಕಿದ್ದಂತೆ ಬಹಳಷ್ಟು ಹೆಚ್ಚಾಗುತ್ತದೆ. ಸ್ವಲ್ಪ ಸಮಯದ ನಂತರ, ಮಹಿಳೆಯರಿಗೆ ತಾವು ಬೋಳಾಗುತ್ತೇವೆ ಎಂದು ಅನ್ನಿಸಲು ಶುರುವಾಗುತ್ತದೆ.

ಹೌದು, ಸಾಕಷ್ಟು ಮಹಿಳೆಯರ ಜೀವನ ಹೆರಿಗೆ ನಂತರ ಬದಲಾಗುತ್ತದೆ. ಇದು ಮಹಿಳೆಯ ಜೀವನವನ್ನು ಬದಲಾಯಿಸುವುದಲ್ಲದೆ, ಆಕೆಯ ದೈಹಿಕ ಆರೋಗ್ಯದ ಮೇಲೂ ಆಳವಾದ ಪರಿಣಾಮ ಬೀರುತ್ತದೆ. ಹೆರಿಗೆಯ ನಂತರ ಮಹಿಳೆಯರು ಎದುರಿಸುವ ಸಾಮಾನ್ಯ ಸಮಸ್ಯೆ ಕೂದಲು ಉದುರುವುದು. ಈ ಸಮಸ್ಯೆ ನಿಧಾನವಾಗಿ ಪ್ರಾರಂಭವಾಗುತ್ತದೆ ಮತ್ತು ಇದ್ದಕ್ಕಿದ್ದಂತೆ ಬಹಳಷ್ಟು ಹೆಚ್ಚಾಗುತ್ತದೆ. ಸ್ವಲ್ಪ ಸಮಯದ ನಂತರ, ಮಹಿಳೆಯರಿಗೆ ತಾವು ಬೋಳಾಗುತ್ತೇವೆ ಎಂದು ಅನ್ನಿಸಲು ಪ್ರಾರಂಭಿಸುತ್ತದೆ. ಆದರೆ ಈ ಸಮಸ್ಯೆ ತುಂಬಾ ಸಾಮಾನ್ಯವಾಗಿದೆ ಮತ್ತು ಪ್ರತಿಯೊಬ್ಬ ಹೊಸ ತಾಯಿಯೂ ಇದನ್ನು ಎದುರಿಸಬೇಕಾಗುತ್ತದೆ.

ಹೆರಿಗೆಯ ನಂತರ ಕೂದಲು ಏಕೆ ಉದುರುತ್ತದೆ?

ಗರ್ಭಾವಸ್ಥೆಯಲ್ಲಿ ಮಹಿಳೆಯರ ದೇಹದಲ್ಲಿ ಈಸ್ಟ್ರೋಜೆನ್ ಹಾರ್ಮೋನ್ ಮಟ್ಟ ಹೆಚ್ಚಾಗುತ್ತದೆ. ಆದರೆ ಮಗುವಿನ ಜನನದ ನಂತರ ಮಹಿಳೆಯರ ದೇಹದಲ್ಲಿ ಈಸ್ಟ್ರೋಜೆನ್ ಹಾರ್ಮೋನ್ ಮಟ್ಟವು ಕಡಿಮೆಯಾಗಲು ಪ್ರಾರಂಭಿಸುತ್ತದೆ. ಇದರಿಂದಾಗಿ ಕೂದಲು ಉದುರಲು ಪ್ರಾರಂಭಿಸುತ್ತದೆ. ಸ್ವಲ್ಪ ಸಮಯದ



ನಂತರ, ಈ ಹಾರ್ಮೋನ್ ಸಾಮಾನ್ಯ ಮಟ್ಟಕ್ಕೆ ಬಂದಾಗ, ಕೂದಲು ಉದುರುವುದು ಸ್ವಯಂಚಾಲಿತವಾಗಿ ನಿಂತು ಹೊಸ ಬೆಳವಣಿಗೆ ಪ್ರಾರಂಭವಾಗುತ್ತದೆ. ಕೂದಲು ಉದುರುವ ಸಮಯದಲ್ಲಿ, ನಿಮ್ಮ ಆಹಾರದಲ್ಲಿ ಪೌಷ್ಟಿಕಾಂಶಯುಕ್ತ ಆಹಾರಗಳನ್ನು ಸೇರಿಸಿಕೊಳ್ಳುವುದು ಮುಖ್ಯ.

ಮಹಿಳೆಯರು ಮಾಡುವ ತಪ್ಪುಗಳೇನು?

ಹೆರಿಗೆಯ ನಂತರ ಕೂದಲು ಉದುರುವಿಕೆಯನ್ನು ನಿಭಾಯಿಸಲು, ಮಹಿಳೆಯರು ಬಯೋಟಿನ್ ಸೇವನೆಯ ಮೇಲೆ ಮಾತ್ರ ಗಮನ ಹರಿಸುತ್ತಾರೆ. ಕೂದಲಿನ ಆರೋಗ್ಯಕ್ಕೆ ಬಯೋಟಿನ್ ಅತ್ಯಗತ್ಯ ಪೋಷಕಾಂಶವೆಂದು ಪರಿಗಣಿಸಲಾಗಿದ್ದರೂ, ಅದು ಮಾತ್ರ ನಿಮ್ಮ ದೇಹದಲ್ಲಿ ಈಸ್ಟ್ರೋಜೆನ್ ಹಾರ್ಮೋನ್ ಮಟ್ಟವನ್ನು ಹೆಚ್ಚಿಸಲು ಸಾಧ್ಯವಿಲ್ಲ. ಇದಕ್ಕಾಗಿ, ನಿಮ್ಮ ಆಹಾರದಲ್ಲಿ ಎಲ್ಲಾ ರೀತಿಯ ಪೋಷಕಾಂಶಗಳನ್ನು ಸೇರಿಸಿಕೊಳ್ಳುವುದು ಮುಖ್ಯ.

ಹೆರಿಗೆಯ ನಂತರ ಕೂದಲು ಮತ್ತೆ ಬೆಳೆಯಲು ಈ ಪೋಷಕಾಂಶಗಳು ಅವಶ್ಯಕ

ಪ್ರೋಟೀನ್: ಪ್ರೋಟೀನ್ ಕೂದಲಿಗೆ ಬಿಲ್ಡಿಂಗ್ ಬ್ಲಾಕ್ ಆಗಿ ಕಾರ್ಯನಿರ್ವಹಿಸುತ್ತದೆ. ಪ್ರೋಟೀನ್ ಇಲ್ಲದೆ, ಕೂದಲು ದುರ್ಬಲವಾಗುತ್ತದೆ ಮತ್ತು ಮುರಿಯುತ್ತದೆ. ಅನೇಕ ಹೊಸ ತಾಯಂದಿರು ಬಹಳ ಕಡಿಮೆ ಪ್ರೋಟೀನ್ ಸೇವಿಸುತ್ತಾರೆ. ಪ್ರತಿದಿನ 80 ರಿಂದ 100 ಗ್ರಾಂ ಪ್ರೋಟೀನ್ ತಿನ್ನಲು ಪ್ರಯತ್ನಿಸಿ.

ಕಬ್ಬಿಣ: ಕೂದಲು ಕಿರುಚೀಲಗಳು ಸೇರಿದಂತೆ ಜೀವಕೋಶಗಳಿಗೆ ಕಬ್ಬಿಣವು ಆಮ್ಲಜನಕವನ್ನು ಪೂರೈಸುತ್ತದೆ.

ಹೆರಿಗೆಯ ನಂತರ ರಕ್ತಸ್ರಾವ ಮತ್ತು ನಿದ್ರೆಯ ಕೊರತೆಯು ದೇಹದಲ್ಲಿ ಕಬ್ಬಿಣದ ಕೊರತೆಯನ್ನು ಉಂಟುಮಾಡುತ್ತದೆ, ಇದು ಅತಿಯಾದ ಕೂದಲು ಉದುರುವಿಕೆ ಮತ್ತು ಶಾಶ್ವತವಾಗಿ ಕೂದಲು ತೆಳುವಾಗುವುದಕ್ಕೆ ಕಾರಣವಾಗುತ್ತದೆ.

ಸತು: ಸತುವು ಅಂಗಾಂಶ ದುರಸ್ತಿಗೆ ಸಹಾಯ ಮಾಡುತ್ತದೆ ಮತ್ತು ಕೂದಲು ಕಿರುಚೀಲಗಳ ಸುತ್ತಲಿನ ಎಣ್ಣೆ ಗ್ರಂಥಿಗಳು ಸರಿಯಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ.

ವಿಟಮಿನ್ ಡಿ: ಹೊಸ ಕೂದಲು ಕಿರುಚೀಲಗಳನ್ನು ರಚಿಸುವಲ್ಲಿ ಮತ್ತು ಕೂದಲಿನ ಬೆಳವಣಿಗೆಯ ಚಕ್ರವನ್ನು ಕಾಪಾಡಿಕೊಳ್ಳುವಲ್ಲಿ ವಿಟಮಿನ್ ಡಿ ಪ್ರಮುಖ ಪಾತ್ರ ವಹಿಸುತ್ತದೆ. ಇದರ ಕೊರತೆಯು ಕೂದಲಿನ ಬೆಳವಣಿಗೆಯನ್ನು ನಿಲ್ಲಿಸುತ್ತದೆ ಮತ್ತು ಕೂದಲು ಉದುರುವಿಕೆಗೆ

ಕಾರಣವಾಗಬಹುದು. ಸೂರ್ಯನ ಬೆಳಕು ವಿಟಮಿನ್ ಡಿ ಯ ಅತ್ಯುತ್ತಮ ಮೂಲವಾಗಿದೆ.

ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು

ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿದೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು ವಾಸಿವಾಗುವಂತೆ ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.

ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳುಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

ಬಾದಾಮಿ ತಿನ್ನುವುದರಿಂದ ಚರ್ಮ, ಕೂದಲು ಮತ್ತು ಆರೋಗ್ಯಕ್ಕಗುವ ಪ್ರಯೋಜನ?

ಇದರಲ್ಲಿರುವ ವಿಟಮಿನ್ ಇ, ಆಂಟಿಆಕ್ಸಿಡೆಂಟ್ಸ್, ಆರೋಗ್ಯಕರ ಕೊಬ್ಬು ನಮ್ಮ ಚರ್ಮವನ್ನು ಕಾಪಾಡುವಲ್ಲಿ ಸಹಾಯ ಮಾಡುತ್ತದೆ. ಬಾದಾಮಿ ಚರ್ಮವನ್ನು ತೇವಗೊಳಿಸಲು ಮತ್ತು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ, ಕೊಲ್ಯಾಜಿನ್ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಆಕ್ಸಿಡೇಟಿವ್ ಹಾನಿಯಿಂದ ರಕ್ಷಿಸುತ್ತದೆ.

ಬಾದಾಮಿಯು ಕೊಬ್ಬಿನಾಮ್ಲಗಳಿಂದ ತುಂಬಿದ್ದು, ಇದು ಕೂದಲಿನ ಆರೋಗ್ಯ ಹಾಗೂ ಬಲ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಬಾದಾಮಿ ಎಣ್ಣೆಯನ್ನು ಕೂದಲಿಗೆ ಹಚ್ಚಿದರೆ, ಕೂದಲಿನ ಆರೋಗ್ಯ ಹೆಚ್ಚಾಗುವುದಲ್ಲದೆ, ಕೂದಲಿನ ಹೊಳಪು ಕೂಡ ಹೆಚ್ಚಾಗುತ್ತದೆ.

ಬಾದಾಮಿಯಲ್ಲಿ ಕಂಡುಬರುವ ಮೆಗ್ನೀಸಿಯಮ್ ಆರೋಗ್ಯಕರ ಕೂದಲನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ಕೊರತೆಯು ಸಾಮಾನ್ಯವಾಗಿ ಕೂದಲು ಉದುರುವಿಕೆಗೆ ಕಾರಣವಾಗುತ್ತದೆ. ಆದ್ದರಿಂದ ಬಾದಾಮಿ ಎಣ್ಣೆ ಅಥವಾ ಬೀಜಗಳನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿಕೊಂಡರೆ, ಕೂದಲು ತೆಳುವಾಗುವುದನ್ನು ತಡೆಯಬಹುದಾಗಿದೆ.

ಬಾದಾಮಿ ಎಣ್ಣೆಯನ್ನು ನೇರವಾಗಿ ನೆತ್ತಿಗೆ ಹಚ್ಚುವ ಮೂಲಕ, ಕೂದಲಿನ ಬೇರುಗಳನ್ನು ಗಟ್ಟಿ ಮಾಡಬಹುದು. ಇದು ಆರೋಗ್ಯಕರ ಕೂದಲು ಪಡೆಯಲು ಹಾಗೂ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ.

ಬಾದಾಮಿಯು ಚರ್ಮವನ್ನು ಮೃದುಗೊಳಿಸುವ ಮತ್ತು ಆರೋಗ್ಯಕರವಾಗಿರುವಂತೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಅಟೊಪಿಕ್ ಎಸ್ಜಿಮಾದಂತಹ ಒಣ ಚರ್ಮದ ಸಮಸ್ಯೆಗೆ ಚಿಕಿತ್ಸೆ ನೀಡಲು ಬಾದಾಮಿ ಎಣ್ಣೆಯನ್ನು ಹೆಚ್ಚಾಗಿ ಶಿಫಾರಸು ಮಾಡಲಾಗುತ್ತದೆ. ಗರ್ಭಾವಸ್ಥೆಯಿಂದ ಉಂಟಾಗುವ ಗುರುತುಗಳನ್ನೂ ಕಡಿಮೆ ಮಾಡಲು ಇದು ಪರಿಣಾಮಕಾರಿಯಾಗಿದೆ.

ಬಾದಾಮಿಯಲ್ಲಿ ವಿಟಮಿನ್ ಇ ಮತ್ತು ಉತ್ಕರ್ಷಣ ನಿರೋಧಕಗಳಿವೆ, ಇದು ಆರೋಗ್ಯಕರ ಚರ್ಮವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ವಿಟಮಿನ್ ಇ ಚರ್ಮವನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ಸಹಾಯ ಮಾಡುತ್ತದೆ, ಇದು ಅಕಾಲಿಕ ವಯಸ್ಸಾಗುವಿಕೆ ಮತ್ತು ಇತರ ಚರ್ಮದ ಸಮಸ್ಯೆಗಳಿಂದ ನಿಮ್ಮ ದೇಹವನ್ನು ದೂರವಿರಿಸುತ್ತದೆ. ಬಾದಾಮಿಯಲ್ಲಿರುವ ಆರೋಗ್ಯಕರ ಕೊಬ್ಬುಗಳು ಚರ್ಮದ ಆರೋಗ್ಯಕ್ಕೆ ಸಹಕಾರಿಯಾಗಿದೆ.

ಬಾದಾಮಿಯು ಮೊನೊಸಾಚುರೇಟೆಡ್ ಫ್ಯಾಟಿ ಆಸಿಡ್ (ಒಗಈಂ) ಗಳಿಂದ ತುಂಬಿದ್ದು, ಇದು ಇನ್ಸುಲಿನ್ ಸುಧಾರಿಸಲು ಮತ್ತು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಪ್ರಯೋಜನಕಾರಿಯಾಗಿದೆ. ಬಾದಾಮಿಯಲ್ಲಿರುವ ಹೆಚ್ಚಿನ ಫೈಬರ್ ಮತ್ತು ಆಂಟಿಆಕ್ಸಿಡೆಂಟ್ ಅಂಶವು ಚರ್ಮದ ಕ್ಯಾನ್ಸರ್ ನಿಂದ ದೇಹವನ್ನು ರಕ್ಷಿಸಲು ಮತ್ತು ಹಾನಿಕಾರಕ ಪರಿಣಾಮಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ತೂಕವನ್ನು ನಿರ್ವಹಿಸಲು ಬಯಸುವವರಿಗೆ, ಬಾದಾಮಿ ಉತ್ತಮ ಆಯ್ಕೆಯಾಗಿದೆ. ಬಾದಾಮಿಯಲ್ಲಿರುವ ಪ್ರೋಟೀನ್, ಫೈಬರ್ ಮತ್ತು ಆರೋಗ್ಯಕರ ಕೊಬ್ಬಿನ ಸಂಯೋಜನೆಯು ಹೊಟ್ಟೆ ತುಂಬಿದ ಭಾವನೆಯನ್ನು ಉತ್ತೇಜಿಸುತ್ತದೆ ಮತ್ತು ಒಟ್ಟಾರೆ ಕ್ಯಾಲೊರಿ ಸೇವನೆಯನ್ನು ಕಡಿಮೆ ಮಾಡುತ್ತದೆ. ಬೆರಳೆಣಿಕೆಯಷ್ಟು ಬಾದಾಮಿಯನ್ನು ತಿನ್ನುವುದು ಹಸಿವನ್ನು ನಿಯಂತ್ರಿಸಲು ಮತ್ತು ಅತಿಯಾಗಿ ತಿನ್ನುವುದನ್ನು ತಡೆಯಲು ಸಹಾಯ ಮಾಡುತ್ತದೆ.

ಬಾದಾಮಿಯ ಗುಣಗಳಲ್ಲಿ ಅತ್ಯುತ್ತಮ ಪ್ರಯೋಜನವೆಂದರೆ ಮೆದುಳಿನ ಕ್ಷಮತೆ ಹೆಚ್ಚಿಸುವುದು. ಬಾದಾಮಿಯಲ್ಲಿರುವ ವಿಟಮಿನ್ ಇ ಮೆದುಳಿನ ತಾರ್ಕಿಕ, ಸ್ಮರಣಾ ಮತ್ತು ಚಿಂತನಾ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ ಹಾಗೂ ಮರೆಗುಳಿತನವನ್ನು ಇಲ್ಲವಾಗಿಸುತ್ತದೆ. ಮಕ್ಕಳಿಗೆ ಪರೀಕ್ಷಾ ಸಮಯದಲ್ಲಿ ಹೆಚ್ಚಿನ ಸ್ಮರಣ ಶಕ್ತಿಯ ಅಗತ್ಯವಿರುವ ಕಾರಣದಿಂದಲೇ ತಾಯಂದಿರುವ ಮಕ್ಕಳಿಗೆ ತಪ್ಪದೇ ಬಾದಾಮಿಯನ್ನು ತಿನ್ನಿಸುತ್ತಾರೆ.

ಬಾದಾಮಿಯನ್ನು ಒಣದಾಗಿದ್ದಾಗ ಸೇವಿಸುವುದಕ್ಕಿಂತ ನೆನೆಸಿಟ್ಟು ಸೇವಿಸಿದಾಗ ಜೀರ್ಣಿಸಿಕೊಳ್ಳುವುದು ಸುಲಭ. ನೆನೆಸಿಟ್ಟ ಬಾದಾಮಿ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ. ಅಲ್ಲದೇ, ಪೋಷಕಾಂಶಗಳನ್ನು ಹೀರಿಕೊಳ್ಳಲು ಹೆಚ್ಚಿನ ಸಹಾಯ ಸಿಗುತ್ತದೆ. ಈ ಪೋಷಕಾಂಶಗಳು ಜೀರ್ಣಕ್ರಿಯೆಯನ್ನು ಉತ್ತೇಜಿಸುವ ಕಿಣ್ವಗಳ ಉತ್ಪಾದನೆಗೆ ಪ್ರಚೋದನೆ ನೀಡುತ್ತವೆ. ಪರಿಣಾಮವಾಗಿ ಜೀರ್ಣಕ್ರಿಯೆ ಸುಲಭ ಮತ್ತು ಪರಿಪೂರ್ಣವಾಗುತ್ತದೆ.

ಬಾದಾಮಿಯು ಒಮೆಗಾ–3 ಕೊಬ್ಬಿನಾಮ್ಲಗಳು ಮತ್ತು ಪಾಲಿಫಿನಾಲ್ ಉರಿಯೂತ ಕಡಿಮೆಗೊಳಿಸುವ ಸಾಮರ್ಥ್ಯ ಹೊಂದಿರುತ್ತದೆ. ನೆನೆಸಿದ ಬಾದಾಮಿ ತಿನ್ನುವುದರಿಂದ ಮುಖದ ಮೇಲೆ ಮೊಡವೆ, ಎಸ್ಜಿಮಾ, ಮತ್ತು ಸೋರಿಯಾಸಿಸ್ ನಂತಹ ಸಮಸ್ಯೆಗಳು ಸಹ ದೂರವಾಗುತ್ತದೆ. ಆರೋಗ್ಯಕರ ಕಾಂತಿಯುಕ್ತ ಚರ್ಮ ನಿಮ್ಮದಾಗುತ್ತದೆ.

ಒಂದು ದಿನಕ್ಕೆ ಸರಿಸುಮಾರು 23 ಬಾದಾಮಿಗಳನ್ನು ತಿನ್ನಬಹುದು ಎಂದು ತಜ್ಞರು ಶಿಫಾರಸು ಮಾಡುತ್ತಾರೆ. ಬಾದಾಮಿಯ ಬಹುತೇಕ ಎಲ್ಲಾ ಪೋಷಕಾಂಶಗಳು ಒಳಗಿನ ತಿರುಳಿನಲ್ಲಿದೆ ಹಾಗೂ ಸಿಪ್ಪೆಯಲ್ಲಿ ಅತ್ಯಲ್ಪ ಪ್ರಮಾಣದಲ್ಲಿವೆ. ಸಿಪ್ಪೆಯಲ್ಲಿ ಕರಗದ ನಾರು ಹೆಚ್ಚಿನ ಪ್ರಮಾಣದಲ್ಲಿದೆ. ಹಾಗಾಗಿ, ಸಿಪ್ಪೆ ಸಹಿತ ತಿನ್ನುವುದು ಉತ್ತಮವೇ ಆದರೂ ಕಡ್ಡಾಯವಲ್ಲ. ಸಿಪ್ಪೆ ನಿವಾರಿಸಿ ತಿನ್ನುವುದರಿಂದ ಹೆಚ್ಚಿನ ನಷ್ಟವೇನೂ ಇಲ್ಲದ ಕಾರಣ ಹಾಗೂ ಸಿಪ್ಪೆಯ ಮೂಲಕ ಸಿಗಬಹುದಾದ ಕರಗದ ನಾರಿನ ಅಂಶ ಬೇರೆ ಆಹಾರದ ಮೂಲಕವೂ ಸಿಗುವ ಸಾಧ್ಯತೆ ಹೆಚ್ಚಿರುವ ಕಾರಣ ಸಿಪ್ಪೆಯನ್ನು ನಿವಾರಿಸಿಯೂ ತಿನ್ನಬಹುದು ಎಂದು ತಜ್ಞರು ಹೇಳುತ್ತಾರೆ.

ದೃಷ್ಟಿಯನ್ನೇ ಕಸಿದುಕೊಳ್ಳುವ ಡೇಂಜರ್ ಗ್ಲುಕೋಮಾ

ಕಂಪ್ಯೂಟರ್ ವೀಕ್ಷಿಸುವುದರಿಂದ ಕಣ್ಣಿನ ಸಮಸ್ಯೆ ಸಾಮಾನ್ಯವಾಗಿದೆ. ಲ್ಯಾಪ್ ಟಾಪ್/ ಕಂಪ್ಯೂಟರ್ ಮೂಲಕ ಕೆಲಸ ಮಾಡುವುದು ಅನಿವಾರ್ಯವಾದ ಕಾರಣ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯವಾಗಿದೆ.

ವಯಸ್ಸಾದಂತೆ ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿರುತ್ತದೆ. ಅಂತಹ ಸಮಸ್ಯೆಗಳಲ್ಲಿ ಗ್ಲುಕೋಮಾ ಕೂಡ ಒಂದು. ಆರಂಭದಲ್ಲಿ ಗ್ಲುಕೋಮಾ ಯಾವುದೇ ತರಹದ ರೋಗ ಲಕ್ಷಣಗಳನ್ನು ತೋರುವುದಿಲ್ಲ. ಸದ್ದಿಲ್ಲದೆ ತನ್ನ ಪಾಡಿಗೆ ತಾನು ಬೆಳವಣಿಗೆ ಆಗುತ್ತಿರುತ್ತದೆ. ವಯಸ್ಸಾಗುತ್ತಾ ಹೋದಂತೆ ಕಣ್ಣಿನೊಳಗಿನ ಹೆಚ್ಚಿದ ಒತ್ತಡವು ಆಪ್ಟಿಕ್ ನರದ ಅಂಗಾಂಶಕ್ಕೆ ಹಾನಿ ಮಾಡುತ್ತದೆ. ಇದರಿಂದ ದೃಷ್ಟಿ ದುರ್ಬಲವಾಗುತ್ತದೆ. ಹಾಗೆಯೇ ಕುರುಡುತನ ಉಂಟು ಮಾಡುತ್ತದೆ. ಇದರಿಂದ ದೂರ ಇರಬೇಕಾದರೆ ಆಗಾಗ ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಳ್ಳುವುದು ಇದಕ್ಕಿರುವ ಒಂದು ಉತ್ತಮ ಮಾರ್ಗ.ವೈದ್ಯರು ರೋಗ ನಿರ್ಣಯ ಮಾಡುವ ಮೂಲಕ ಕಣ್ಣುಗಳ ನರಮಂಡಲಗಳ ಮೇಲೆ ಇರುವ ಒತ್ತಡ ಮತ್ತು ಕಣ್ಣುಗಳ ದೃಷ್ಟಿಗೆ ಸಂಬಂಧಪಟ್ಟಂತೆ ಪರೀಕ್ಷೆಗಳನ್ನು ಮಾಡುತ್ತಾರೆ. ಇದರಿಂದ ಗಂಭೀರವಾದ ದೃಷ್ಟಿ ಸಮಸ್ಯೆ ಎದುರಾಗುವ ಮುನ್ನವೇ ಸಮಸ್ಯೆಯನ್ನು

ನಗರಕ್ಕೆ 6 ಹೊಸ ವಿದ್ಯಾರ್ಥಿ ನಿಲಯ ಮಂಜೂರು : ಡಾ. ಜಿ. ಪರಮೇಶ್ವರ್

ತುಮಕೂರು : ವಿದ್ಯಾರ್ಥಿಗಳ ಸಂಖ್ಯೆ ದಿನೇ ದಿನೆ ಹೆಚ್ಚುತ್ತಿರುವುದರಿಂದ ನಗರದಲ್ಲಿ ವಿವಿಧ ಇಲಾಖೆಗಳಡಿ ಕಾರ್ಯ ನಿರ್ವಹಿಸುತ್ತಿರುವ 58 ವಿದ್ಯಾರ್ಥಿ ನಿಲಯಗಳ ಜೊತೆಗೆ ಹೆಚ್ಚುವರಿಯಾಗಿ 6 ಹೊಸ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗಿದೆ ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ್ ತಿಳಿಸಿದರು.

ನಗರದ ಹೊರವಲಯ ಮೈದಾಳ ರಸ್ತೆಯಲ್ಲಿರುವ ಶ್ರೀ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಸ್ನಾತಕೋತ್ತರ ಮಹಿಳೆಯರ ವಿದ್ಯಾರ್ಥಿ ನಿಲಯಕ್ಕೆ ಮಂಗಳವಾರ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು ಹೆಚ್ಚುವರಿಯಾಗಿ ಮಂಜೂರಾಗಿರುವ 6 ವಿದ್ಯಾರ್ಥಿ ನಿಲಯಗಳನ್ನು ಪ್ರಸ್ತುತ ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದ್ದು, ಶೀಘ್ರವೇ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಇಂಜಿನಿಯರಿಂಗ್, ವಿಶ್ವವಿದ್ಯಾನಿಲಯ, ಮತ್ತಿತರ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಈ ನಿಲಯದಲ್ಲಿದ್ದು, ಸಮಾಜದಲ್ಲಿ ಉತ್ತಮ ಹಾಗೂ ಆರೋಗ್ಯವಂತ ಪ್ರಜೆಗಳನ್ನಾಗಿ ರೂಪಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಪೌಷ್ಟಿಕ ಆಹಾರ, ನಿಗಧಿಪಡಿಸಿರುವ ಆಹಾರ ಪಟ್ಟಿಯನ್ವಯ ವಾರಕ್ಕೆ 4 ದಿನ ಮೊಟ್ಟೆ, ಬಾಳೆಹಣ್ಣು ಹಾಗೂ ವಾರಕ್ಕೊಮ್ಮೆ ಮಾಂಸಹಾರ ಒದಗಿಸಲಾಗುತ್ತಿದೆಯಲ್ಲದೆ, ಪ್ರತಿ ವಿದ್ಯಾರ್ಥಿಗೆ ತಿಂಗಳಿಗೊಮ್ಮೆ ಸೋಪು, ಕೊಬ್ಬರಿಎಣ್ಣೆ, ಮತ್ತಿತರ ದಿನಬಳಕೆ ವಸ್ತುಗಳುಳ್ಳ ಕಿಟ್ ಅನ್ನು ನೀಡಲಾಗುತ್ತಿದೆ. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಅನುವಾಗುವಂತೆ ಪರೀಕ್ಷಾ ಪೂರ್ವ ಸಿದ್ಧತೆಗಾಗಿ ಪೂರಕ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಒದಗಿಸುವ ಮೂಲಕ ಮಾದರಿ ವಿದ್ಯಾರ್ಥಿ ನಿಲಯವನ್ನಾಗಿ ರೂಪಿಸಿ ನಿರ್ವಹಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 262 ವಸತಿ ನಿಲಯ : ಬೆಳಗಾವಿ, ಕಲ್ಬುರ್ಗಿ ಹೊರತುಪಡಿಸಿ ಅತಿ ಹೆಚ್ಚು ವಸತಿ ನಿಲಯಗಳನ್ನು ಹೊಂದಿರುವ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ 104, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 121, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ 16, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆಯ 21 ಸೇರಿದಂತೆ ಒಟ್ಟು 262 ವಸತಿ ನಿಲಯಗಳು

ಕಾರ್ಯನಿರ್ವಹಿಸುತ್ತಿವೆ. ವಸತಿ ನಿಲಯಗಳಿಗೆ ಸರ್ಕಾರದಿಂದ ಮಂಜೂರಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ದಾಖಲಾಗುವವರ ಸಂಖ್ಯೆ ಹೆಚ್ಚುತ್ತಿರುವುದರಿಂದ ಜಿಲ್ಲೆಯಲ್ಲಿ ಹೆಚ್ಚುವರಿಯಾಗಿ ಸಮಾಜ ಕಲ್ಯಾಣ ಇಲಾಖೆಯಡಿ 7 ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 6 ಹೊಸ ವಸತಿ ನಿಲಯಗಳನ್ನು ನಿರ್ಮಿಸಲು ಸರ್ಕಾರ ಅನುಮೋದನೆ ನೀಡಿದ್ದು, ನಿರ್ಮಾಣ ಕಾಮಗಾರಿಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ. ಪ್ರಸಕ್ತ ವರ್ಷ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕವಾಗಿ ವಸತಿ ನಿಲಯ ನಿರ್ಮಾಣ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದ್ದು, ಶೀಘ್ರದಲ್ಲಿಯೇ ಕಾರ್ಯಗತಗೊಳಿಸಲಾಗುವುದು ಎಂದು ತಿಳಿಸಿದರು. ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ನಡೆಯುತ್ತಿರುವ ವಸತಿ ನಿಲಯಗಳಿಗೆ ಸರ್ಕಾರವು 25,455 ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಿದ್ದು, ಈ ಪೈಕಿ 25,450 ವಿದ್ಯಾರ್ಥಿಗಳು ದಾಖಲಾಗಿದ್ದಾರೆ. ವಸತಿ ನಿಲಯಗಳಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ, ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಶ್ರಮಿಸುತ್ತಿದೆ. ಜಿಲ್ಲೆಯಲ್ಲಿರುವ ಎಲ್ಲಾ ವಸತಿ ನಿಲಯಗಳ ಸಮರ್ಪಕ ನಿರ್ವಹಣೆಗೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಸಚಿವರಿಂದ ವಸತಿ ನಿಲಯ ಪರಿಶೀಲನೆ : ಇದಕ್ಕೂ ಮುನ್ನ ಸಚಿವರು ವಸತಿ ನಿಲಯದ ವಿದ್ಯಾರ್ಥಿಗಳ ಕೊಠಡಿ, ಅಡುಗೆ ಕೋಣೆ, ದಾಸ್ತಾನು ಕೋಣೆ, ಊಟದ ಕೋಣೆ, ಗ್ರಂಥಾಲಯಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ವಸತಿ ನಿಲಯದಲ್ಲಿ ಶುಚಿತ್ವ ಕಾಪಾಡಿಕೊಂಡ ಸಿಬ್ಬಂದಿಯ ಕಾರ್ಯವೈಖರಿಗೆ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು. ವಸತಿ ನಿಲಯದ ವಿದ್ಯಾರ್ಥಿಗಳ ಸಾಮರ್ಥ್ಯ, ನಿಲಯಕ್ಕೆ ಪ್ರಸಕ್ತ ವರ್ಷ ದಾಖಲಾದ ವಿದ್ಯಾರ್ಥಿಗಳು ಹಾಗೂ ಹಾಜರಾದ ವಿದ್ಯಾರ್ಥಿಗಳ ಮಾಹಿತಿಯನ್ನು ನಿಲಯ ಮೇಲ್ವಿಚಾರಕಿ ಅರ್ಪಿತ ಅವರಿಂದ ಪಡೆದು ಕೊಂಡರು. ವಿದ್ಯಾರ್ಥಿಗಳಿಗಾಗಿ ತಯಾರಿಸಿಟ್ಟಿದ್ದ ಆಹಾರವನ್ನು ಸಚಿವರು ಪರಿಶೀಲಿಸಿದರು. ಅಡುಗೆ ಸಿಬ್ಬಂದಿಯ ವೇತನದ ಬಗ್ಗೆ ಮಾಹಿತಿ ಪಡೆದ ಅವರು ಮೆನು ಚಾರ್ಟ್‌ನಲ್ಲಿರುವಂತೆ ಪ್ರತಿ ದಿನ ಕಡ್ಡಾಯವಾಗಿ ಶುಚಿ ಹಾಗೂ ರುಚಿಯಾದ ಆಹಾರ ತಯಾರಿಸಿ ವಿದ್ಯಾರ್ಥಿಗಳಿಗೆ ನೀಡಬೇಕೆಂದು ಅಡುಗೆ ಸಿಬ್ಬಂದಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸೋನಿಯಾ ವರ್ಣೇಕರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಬ್ಬೀರ್ ಅಹಮ್ಮದ್, ಪರಿಶಿಷ್ಟವರ್ಗಗಳ ಕಲ್ಯಾಣಾಧಿಕಾರಿ ಸಿದ್ದರಾಜು, ಮತ್ತಿತರ ಅಧಿಕಾರಿ/ಸಿಬ್ಬಂದಿ ಉಪಸ್ಥಿತರಿದ್ದರು.

ಏಕಗವಾಕ್ಷಿ ಸಮಿತಿ ಕೈಗಾರಿಕಾ ಸ್ಪಂದನ ಸಭೆ

ಚಿಕ್ಕಮಗಳೂರು, ಜೂ. 10: ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಮತ್ತು ಕೈಗಾರಿಕಾ ಸ್ಪಂದನ ಸಭೆಯು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರ ಅಧ್ಯಕ್ಷತೆಯಲ್ಲಿ ಜೂನ್ 13 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ಜಿಲ್ಲೆಯ ಕೈಗಾರಿಕೋದ್ಯಮಿಗಳು ತಮ್ಮ ಮನವಿ, ಅಹವಾಲುಗಳಿದ್ದಲ್ಲಿ ಜೂನ್ 12 ರೊಳಗೆ ಲಿಖಿತ ರೂಪದಲ್ಲಿ ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರ (08262-295821) ವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೂ.12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಬಗ್ಗೆ ಕಾನೂನು ಅರಿವು

ಚಿಕ್ಕಮಗಳೂರು, ಜೂ. 10: ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮವು ಜೂನ್ 12 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಮಲೆನಾಡು ವಿದ್ಯಾಸಂಸ್ಥೆಯ ಶ್ರೀಮತಿ ಸುಂದರಮ್ಮ ಶಂಕರಮೂರ್ತಿ ಸಭಾಂಗಣದಲ್ಲಿ ನಡೆಯಲಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ, ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ, ಸಹಾಯಕ ಕಾರ್ಮಿಕ ಆಯುಕ್ತ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ, ವಕೀಲರ ಸಂಘದ ಅಧ್ಯಕ್ಷ ಡಿ.ಬಿ.ಸುಚೇಂದ್ರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಕೆ.ಆರ್.ಜಯಶೀಲಾ, ಪೌರಾಯುಕ್ತ ಬಿ.ಸಿ.ಬಸವರಾಜ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಕೆ.ಪುಟ್ಟರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಮಹಾಂತೇಶ್ ಭಜಂತ್ರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಬಿ.ಮಾಲತಿ, ಪಾಲ್ಗೊಳ್ಳುವರು.

ಪರಿಸರ ಉಳಿಸುವಲ್ಲಿ ಜಾಗೃತಿ ಮೂಡಿಸುವುದು ಅಗತ್ಯ

ಚಿಕ್ಕಮಗಳೂರು–ಪ್ರತಿಯೊಬ್ಬರಲ್ಲಿ ಪರಿಸರ ಉಳಿಸುವ ಬಗ್ಗೆ ಕಾಳಜಿ ಸ್ವಚ್ಛತೆ ಮೂಲಕ ಅರಿವು ಮೂಡಿಸಬೇಕಾದ ಅಗತ್ಯ ಇದೆ ಎಂದು ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್ ಕರೆ ನೀಡಿದರು.

ಅವರು ಇಂದು ನಗರಸಭೆ ಆವರಣದಲ್ಲಿ ವಿಶ್ವ ಪರಿಸರ ದಿನಾಚಾರಣೆ ಅಂಗವಾಗಿ ತಾಯಿ ಹೆಸರಿನಲ್ಲಿ ಒಂದು ಗಿಡ ಶೀರ್ಷಿಕೆ ಅಡಿಯಲ್ಲಿ ಸಸಿ ನಡುವ ಕಾರ್ಯಕ್ರಮ ಹಾಗೂ ಜಾಗತಿಕ ಮಟ್ಟದಲ್ಲಿ ಪ್ಲಾಸ್ಟಿಕ್ ಮಾಲಿನ್ಯ ನಿರ್ಮೂಲನೆ ಕುರಿತು ಪ್ರತಿಜ್ಞೆ ಸ್ವೀಕರಿಸಿ ಮಾತನಾಡಿದರು.

ಜಿಲ್ಲೆ ಪರಿಸರದ ಮಡಿಲಾಗಿದ್ದು ದಟ್ಟ ಅರಣ್ಯ ನದಿ ಮೂಲಗಳನ್ನು ಹೊಂದಿರುವ ಪ್ರವಾಸೋದ್ಯಮಕ್ಕೆ ಪೂರಕವಾದ ವಿಶೇಷ ಜಿಲ್ಲೆಯಾಗಿದ್ದು, ಪರಿಸರ ಉಳಿದರೆ ಆರೋಗ್ಯವಂತ ಜೀವ ಸಂಕುಲಗಳು ಸಮೃದ್ಧಿ ಜೀವನಕ್ಕೆ ನಾಂದಿಯಾಗುತ್ತದೆ ಎಂದರು.

ಮನೆಗೊಂದು ಮಗು ಮಗುವಿಗೊಂದು ಮರ ಎಂಬ ಘೋಷ ವಾಕ್ಯದೊಂದಿಗೆ ಪ್ರತಿಯೊಬ್ಬರು ಮನೆಗೊಂದು ಮರ ನೆಟ್ಟು ಪೋಷಿಸಿದರೆ ಒಳ್ಳೆಯ ಗಾಳಿ, ಹಣ್ಣು, ಹೂವು ಕೊಡುತ್ತದೆ ಈ ನಿಟ್ಟಿನಲ್ಲಿ ಪರಿಸರ ಕಾಪಾಡಲು ಮುಂದಾಗಬೇಕು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರು ನಮ್ಮ ಭೂಮಿ ನಮ್ಮ ನೆಲ ಅಭಿಯಾನ ಆರಂಭಿಸಿ ಮಣ್ಣಿನಲ್ಲಿ ಇರುವ ಖನಿಜ ಅಂಶವನ್ನು ಉಳಿಸಲು ಇದು ಸಹಕಾರಿಯಾಗಿದೆ ಎಂದು ತಿಳಿಸಿದರು.

ಪಕ್ಷಿಗಳಿಗೆ ಆಹಾರವಾಗಲು ನೆರವಾಗುವಂತೆ ನಗರಸಭೆ ಆವರಣದಲ್ಲಿ ವಿವಿಧ ಹಣ್ಣಿನ ಗಿಡಗಳನ್ನು ನೆಡಲಾಗಿದ್ದು, ನಗರದೆಲ್ಲೆಡೆ ಇರುವ ಪಾರ್ಕ್‌ಗಳಲ್ಲಿ ಗಿಡ ನೆಡುವ ಅಭಿಯಾನ ಆರಂಭಿಸಲು ಗುರಿ ಹೊಂದಲಾಗಿದೆ ಎಂದರು.

ಚಿಕ್ಕಚಾಕ್ಲೇಟ್ ಕವರ್‌ನಿಂದ ಪ್ರಾರಂಭವಾಗಿ ದೊಡ್ಡ-ದೊಡ್ಡ ಬಾಟಲ್, ಕೈ ಚೀಲಗಳು ಬಳಸುತ್ತಿದ್ದು ಇದರಿಂದ ಪರಿಸರಕ್ಕೆ ಹಾನಿಯಾಗುತ್ತಿದೆ ಎಂದು ವಿಷಾಧಿಸಿದ ಅವರು ಇದನ್ನು ಮನೆಗಳಲ್ಲಿಯೇ ನಿಯಂತ್ರಿಸಿದಾಗ ಮಾತ್ರ ಪರಿಸರ ಉಳಿಸಲು ಸಾಧ್ಯ ಎಂದರು.

ಪೌರಾಯುಕ್ತ ಬಿ.ಸಿ ಬಸವರಾಜ್ ಮಾತನಾಡಿ ಪ್ರಧಾನಿ ನರೇಂದ್ರ ಮೋದಿಯವರು ಸ್ವಚ್ಛ ಭಾರತ್ ಯೋಜನೆಯಡಿ ಪರಿಸರಕ್ಕೆ ಪೂರಕವಾದ ಅನೇಕ ಯೋಜನೆಗಳನ್ನು ಜಾರಿಗೆ ತಂದು ಈ ಮೂಲಕ ಕೆರೆ, ಕಟ್ಟೆ, ನದಿ, ಕಲ್ಯಾಣಿ ಸ್ವಚ್ಛತೆಗೆ ಆದ್ಯತೆ ನೀಡಿದ್ದಾರೆ ಎಂದು ಹೇಳಿದರು.

ಪ್ರಸಕ್ತ ವರ್ಷದಿಂದ ಮನೆಗೊಂದು ಮರ ನೆಡಬೇಕೆಂಬ ಗುರಿಯನ್ನು ಹೊಂದಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರ ವಿಶೇಷ ಯೋಜನೆ ಜಾರಿಮಾಡಿದೆ, ನಗರಸಭೆಯ ಪಾರ್ಕ್ ಅಭಿವೃದ್ಧಿಗೆ 10 ಲಕ್ಷರ ರೂ ಅನುದಾನ ಬಿಡುಗಡೆಯಾಗಿದೆ ಎಂದು ತಿಳಿಸಿದರು.

ಪರಿಸರ ಉಳಿದರೆ ಜನರ ಆರೋಗ್ಯ ಕಾಪಾಡಲು ಸಹಕಾರಿಯಾಗಲಿದೆ, ಕಾಲ-ಕಾಲಕ್ಕೆ ಮಳೆ ಬರುವುದರಿಂದ ಪ್ರಕೃತಿ ಅಸಮತೋಲನವಾಗುವುದು ತಪ್ಪುತ್ತದೆ ಎಂಬುವುದನ್ನು ಸರ್ಕಾರಗಳು ಮನಗಂಡಿವೆ ಎಂದರು.

ಈ ಸಂದರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ವರಸಿದ್ಧಿ ವೇಣುಗೋಪಾಲ್, ಸದಸ್ಯರಾದ ಪರಮೇಶ್, ಪ್ರಸಾದ್ ಅಮೀನ್ ಮತ್ತಿತರರು ಉಪಸ್ಥಿತರಿದ್ದರು.

ಮರ ಬೆಳೆಸಿ ಪರಿಸರ ಕಾಪಾಡಲು ಪ್ರತಿಯೊಬ್ಬರೂ ಕೈಜೋಡಿಸಿ

ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಭಾನುಮತಿ

ಚಿಕ್ಕಮಗಳೂರು : ಇಂದಿನ ಋತುಮಾನಗಳ ವ್ಯತ್ಯಾಸ, ತಾಪಮಾನದ ಹೆಚ್ಚಳದಲ್ಲಿ ಪರಿಸರದ ಪಾತ್ರ ಮುಖ್ಯವಾಗಿದೆ. ಸ್ವಚ್ಛ, ಸುಂದರ ಪರಿಸರ ಕಾಪಾಡಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಹಸಿರು ಪರಿಸರ ಪ್ರೀತಿ ಹೆಚ್ಚಲು, ಪರಿಸರದೊಂದಿಗೆ ಬಾಂಧವ್ಯ ಬೆಳೆಯಲು ಮನೆಯ ಸುತ್ತಮುತ್ತ ಮರ-ಗಿಡಗಳನ್ನು ಬೆಳೆಸಬೇಕೆಂದು ಗೌರವಾನ್ವಿತ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಭಾನುಮತಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಆಯುಷ್ ಇಲಾಖೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

1972ರಲ್ಲಿ ವಿಶ್ವ ಸಂಸ್ಥೆ ವಿಶ್ವ ಪರಿಸರ ದಿನವನ್ನು ಘೋಷಿಸಿತು. ವಿಶ್ವದಾದ್ಯಂತ ಸುಮಾರು 143

ದೇಶಗಳು ಇಂದು (ಜೂ.5) ವಿಶ್ವ ಪರಿಸರ ದಿನವನ್ನು ಆಚರಿಸುತ್ತಿವೆ. ಪರಿಸರ ಸಂರಕ್ಷಣೆಗಾಗಿ ಜಾಗೃತಿ ಮೂಡಿಸುವುದು ಇದರ ಮೂಲ ಉದ್ದೇಶವಾಗಿದೆ ಎಂದರು.

ಆಧುನಿಕ ಶೈಲಿಯಿಂದ ಪರಿಸರದ ಮೇಲೆ ಅನೇಕ ರೀತಿಯ ದುಷ್ಪರಿಣಾಮಗಳು ಉಂಟಾಗುತ್ತಿವೆ. ಪರಿಸರ ಕಾಳಜಿ, ಪ್ರತಿಯೊಬ್ಬರಲ್ಲೂ ಮೂಡಬೇಕು. 'ಪ್ಲಾಸ್ಟಿಕ್ ತ್ಯಜಿಸಿ, ಪ್ಲಾಸ್ಟಿಕ್ ಬಳಸುವುದನ್ನು ಕೊನೆಗೊಳಿಸಿ' ಎಂಬುದು ಈ ವರ್ಷದ ವಿಶ್ವ ಪರಿಸರ ದಿನಾಚರಣೆ-ಯ ಧ್ಯೇಯವಾಕ್ಯವಾಗಿದೆ. ಮಕ್ಕಳಲ್ಲಿ ಪರಿಸರ ಪ್ರೇಮ ಬೆಳೆಸುವುದರಿಂದ ಗಿಡ-ಮರಗಳ ಬಗ್ಗೆ ಪ್ರೀತಿ ಹೆಚ್ಚಿ ಭವಿಷ್ಯದಲ್ಲಿ ಹಸಿರು ಪರಿಸರ, ಕಾಡು ಕಾಪಾಡಲು ಸಾಧ್ಯವಾಗುತ್ತದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಸುಜೇಂದ್ರ ಮಾತನಾಡಿ, ಪ್ಲಾಸ್ಟಿಕ್ ಬಳಕೆಯನ್ನು ತ್ಯಜಿಸಬೇಕು. ಹಳೆಯ ಮತ್ತು ತ್ಯಾಜ್ಯ ಉತ್ಪನ್ನಗಳನ್ನು ಮರುಬಳಕೆ ಮಾಡಬೇಕು. ಮರಗಿಡಗಳನ್ನು ನೆಡುವ ಮೂಲಕ ಪರಿಸರ ಕಾಪಾಡುವಂತೆ ಹೇಳಿದ ಅವರು, ವಿದ್ಯಾರ್ಥಿಗಳಲ್ಲಿ ಪರಿಸರ ಪ್ರೇಮವನ್ನು ಬೆಳೆಸುವಂತೆ ಪ್ರೇರೇಪಿಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಿ ಪರಿಸರ ಸ್ವಚ್ಛತೆಗೆ ಕೈಜೋಡಿಸಬೇಕು ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಮಾತನಾಡಿ, ಇಂದಿನ ದಿನಗಳಲ್ಲಿ ಮರಗಿಡಗಳನ್ನು ಕಡಿಯುತ್ತಿರುವುದರಿಂದ ಪರಿಸರದ ಅಸಮತೋಲನ ಉಂಟಾಗುತ್ತಿದೆ. ಇದರಿಂದ ಉಸಿರಾಡಲು ಪರಿಶುದ್ಧವಾದ ಗಾಳಿ ಸಿಗದಂತಹ ಸ್ಥಿತಿ ನಿರ್ಮಾಣವಾಗಿದೆ. ಪರಿಸರ ಸಮತೋಲನವನ್ನು ಕಾಪಾಡಲು ಹಾಗೂ ಮುಂದಿನ ಪೀಳಿಗೆಗೆ ಉತ್ತಮವಾದ ಪರಿಸರವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ. ಪ್ರತಿಯೊಬ್ಬರೂ ಮರಗಿಡಗಳನ್ನು ನೆಟ್ಟು ಪೋಷಿಸಬೇಕು ಎಂಬ ದೃಢ ಸಂಕಲ್ಪ ಮಾಡಿದರೆ ಉತ್ತಮವಾದ ಪರಿಸರವನ್ನು ಸೃಷ್ಟಿಸಲು ಸಾಧ್ಯ ಎಂದು ತಿಳಿಸಿದರು.

ಬ್ರಹ್ಮಕುಮಾರಿ ಈಶ್ವರ